ಸಂಪುಟ : 10 ಸಂಚಿಕೆ: 230 ಪುಟ : 4+2 ಬೆಲೆ: 3.00 ಶುಕ್ರವಾರ ಅಕ್ಟೋಬರ್ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 230 Pages : 4+2 Price : 3.00 Friday October 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಮತ

# ಕಿತ್ತೂರು ಚೆನ್ನಮ್ಮ ಸ್ವಾಭಿಮಾನದ ಪ್ರತೀಕ

**■ವಿಜಯಸಾಕ್ಷಿ ಸುದ್ದಿ, ಗದಗ**

ವೀರರಾಣಿ ಕಿತ್ತೂರು ಚೆನ್ನಮ್ಮ ಸ್ವಾಭಿಮಾನದ ಪ್ರತೀಕ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬ್ರಿಟೀಷರೊಂದಿಗೆ ಧೈರ್ಯ, ಶೌರ್ಯದಿಂದ ಹೋರಾಡಿದ ವೀರಮಾತೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಗುರುವಾರ ಜರುಗಿದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಿಟೀಷರು ಪ್ರತಿ ವರ್ಷ ಬ್ರಿಟೀಷ್ ಸಾಮ್ರಾಜ್ಯಕ್ಕೆ ಇಂತಿಷ್ಟು ಕಪ್ಪ (ಕರ) ನೀಡಬೇಕೆಂದು ವಿವಿಧ ರಾಜರುಗಳಿಗೆ ಕರಾರು ಹಾಕಿದರು. ಭಾರತದಲ್ಲಿಯ ರಾಜ್ಯಗಳ ರಾಜರಿಂದ ಬ್ರಿಟೀಷರು ಈ ರೀತಿ ಕಪ್ಪವನ್ನು ವಸೂಲು ಮಾಡುತ್ತಿದ್ದರು. ಆದರೆ ಕಿತ್ತೂರು ವೀರರಾಣಿ ಚನ್ನಮ್ಮ ಮಾತ್ರ ನಾವು ಕಪ್ಪ ಕೊಡುವುದಿಲ್ಲ ಎಂದು ಬ್ರಿಟೀಷರಿಗೆ ಎಚ್ಚರಿಕೆ ನೀಡಿದರು. ಕ್ರಿ.ಶ. 1824ರಲ್ಲಿ ಬ್ರಿಟೀಷರ ವಿರುದ್ಧ ತನ್ನ ಸಾಮ್ರಾಜ್ಯವನ್ನು ಉಳಿಸಿಕೊಳ್ಳಲು ವೀರಾವೇಶದಿಂದ ಹೋರಾಡಿದ ದಿಟ್ಟ ಮಹಿಳೆ. ರಾಣಿ ಚೆನ್ನಮ್ಮಳ ಧೈರ್ಯ, ಸಾಹಸ ಎಲ್ಲರಿಗೂ ಮಾದರಿ ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ವೀರರಾಣಿ ಕಿತ್ತೂರು ಚೆನ್ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿದ ವೀರಮಾತೆ. ಭವ್ಯ ಭಾರತದಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಪಸರಿಸಿದ ಕೀರ್ತಿ ವೀರರಾಣಿ ಚೆನ್ನಮ್ಮ ಅವರಿಗೆ ಸಲ್ಲುತ್ತದೆ ಎಂದರು.



ಗಣ್ಯರಾದ ವಿಜಯಕುಮಾರ ಗಡ್ಡಿ ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಸರ್ಕಾರದಿಂದ ಆಚರಿಸುತ್ತಿರುವುದು ಸಂತಸದ ವಿಷಯ. ಕನ್ನಡ ನಾಡಿನ ಜನರು ಹೆಮ್ಮೆಪಡುವ ವಿಷಯವಾಗಿದೆ. ಕಿತ್ತೂರು ರಾಣಿ ಚೆನ್ನಮ್ಮನವರು ಭಾರತದ ಪ್ರಪ್ರಥಮ ಮಹಿಳಾ ಹೋರಾಟಗಾರ್ತಿ. ಇವರ ಶೌರ್ಯ, ತ್ಯಾಗ ಎಲ್ಲ ಮಹಿಳೆಯರಿಗೂ ಪ್ರೇರಣೆಯಾಗಿವೆ ಎಂದರು. ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಸೋಮಶೇಖರ ಕೆರಿಮನಿ ಉಪನ್ಯಾಸಕ ನೀಡಿ, ಕಿತ್ತೂರು ಸಂಸ್ಥಾನದ ರಕ್ಷಣೆಗಾಗಿ ಹೋರಾಡಿದ, ಪ್ರಥಮ ಸ್ವಾತಂತ್ರ್ಯ ಸಂಗ್ರಾಮಕ್ಕೆ ನಾಂದಿ ಹಾಡಿದ ಮಹಿಳೆ ಚೆನ್ನಮ್ಮ. ಭವ್ಯ ಭಾರತದ ಇತಿಹಾಸದಲ್ಲಿ ಸ್ವಾತಂತ್ರ್ಯದ ಹೊಸ ಕಲ್ಪನೆ ನೀಡಿದ ಪುಣ್ಯಭೂಮಿಯೇ ಕಿತ್ತೂರು ಸಂಸ್ಥಾನ. ಸತ್ತರೆ ವೀರ ಸ್ವರ್ಗ, ಉಳಿದರೆ ಕಿತ್ತೂರು ನೆಲ ಎಂದ ರಾಣಿ ಚೆನ್ನಮ್ಮ ಬ್ರೀಟೀಷರಿಗೆ ನಡುಕ ಹುಟ್ಟಿಸಿದ್ದಲ್ಲದೇ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚು ಮೂಡಿಸಿದರು ಎಂದು ಬಣ್ಣಿಸಿದರು.

> ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಮಾತನಾಡಿ, ವೀರರಾಣಿ ಕಿತ್ತೂರ ಚೆನ್ನಮ್ಮರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಶೌರ್ಯ, ಮಾನವೀಯ ಮೌಲ್ಯಗಳ ಕುರಿತು ಈಗಿನ ಮಕ್ಕಳಿಗೆ ತಿಳುವಳಿಕೆ ನೀಡಬೇಕು. ಮಕ್ಕಳಿಗೆ ಆತ್ಮಸ್ಥೈರ್ಯ ವೃದ್ಧಿಸಲು ಕರಾಟೆ, ಕುಸ್ತಿಗಳಂತಹ ಸ್ವಯಂ ರಕ್ಷಣಾ ಕಲೆಗಳನ್ನು ಕಲಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಹಾಗೂ ಸಮಾಜ ಸೇವೆಯಲ್ಲಿ ತೊಡಗಿದ ವಿವಿಧ ಸಾಧಕರನ್ನು ಸನ್ಮಾನಿಸಲಾಯಿತು. ಜಾನಪದ ಅಕಾಡೆಮಿ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ಹಾಗೂ ಬಸವರಾಜ ಹಡಗಲಿ ತಂಡದವರು ವೀರರಾಣಿ ಕಿತ್ತೂರ ಚನ್ನಮ್ಮ ಕುರಿತು ಜನಪದ ಗೀತೆ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಅಧಿಕಾರಿಗಳಾದ ಶ್ರೀನಿವಾಸಮೂರ್ತಿ ಕುಲಕರ್ಣಿ, ಆರ್.ಎಸ್. ಬುರುಡಿ, ಡಾ. ಬಸವರಾಜ ಬಳ್ಳಾರಿ, ಗಣ್ಯರಾದ ಈರಣ್ಣ ಕರಿಭಿಷ್ಠಿ, ಎಫ್.ಮರಿಗೌಡ್ರ, ಶರಣಪ್ಪ ಗುಡಿಮನಿ, ಬಸಣ್ಣಪ್ಪ ಚಿಂಚಲಿ, ಅಯ್ಯಪ್ಪ ಅಂಗಡಿ, ಅಜ್ಜಣ್ಣ ಹಿರೇಮನಿ ಪಾಟೀಲ, ಶಿವು ಕವಲೂರು, ಮಹಾಬಲೇಶ ಶೆಟ್ಟರ, ರವಿ ಪಾಟೀಲ, ಮುರುಗೇಶ ಹಡಗಲಿ, ಎಸ್.ಎಸ್. ಹುಡಕಜ್ಲಿ, ಪಶಾಂತ ನರೇಗಲ್ಲ, ಪರಪ್ಪ ಕಮತರ, ಚಿನ್ನೂರ, ಚನ್ನವೀರಪ್ಪ ಮಳಗಿ, ಮಹೇಶ ಕರಿಭಿಷ್ಠಿ, ವಿರೂಪಾಕ್ಷಪ್ಪ ಮಟ್ಟಿ, ಸ್ವಾತಿ ಅಕ್ಕಿ, ಈರಮ್ಮ ತಾಳಿಕೋಟಿ, ಜಯಶ್ರೀ ಉಗಲಾಟದ, ಜಯಾಶ್ರೀ ಅಣ್ಣಿಗೇರಿ, ವೀರಣ್ಣ ಮಾಳವಾಡ, ಮರಿಗೌಡ್ರ, ಸಿ.ಕೆ. ಮಾಳಶೆಟ್ಟಿ, ರಾಜು ಬಗಾಡೆ ಸೇರಿದಂತೆ ಇತರರು ಇದ್ದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.

### ಹತ್ತಿ ಕೃಷಿ ಉತ್ಪನ್ನಕ್ಕೆ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆ

# ರೈತರ ನೋಂದಣಿಗೆ ಅ.31ರವರೆಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಜ್ಯದಲ್ಲಿ ಹತ್ತಿ ಪ್ರಮುಖ ಬೆಳೆಯಾಗಿದ್ದು, ಹತ್ತಿ ಕೃಷಿ ಉತ್ಪನ್ನಕ್ಕೆ ಪ್ರಸ್ತುತ ಮಾರುಕಟ್ಟೆ ದರವು ಕಡಿಮೆಯಾಗಿರುವುದರಿಂದ ಕೇಂದ್ರ ಸರ್ಕಾರವು 2025-26ನೇ ಸಾಲಿಗೆ ಹತ್ತಿ ಕೃಷಿ ಉತ್ಪನ್ನಕ್ಕೆ ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿಗೆ ರೂ. 7,710 ಮತ್ತು ಉದ್ದನೆಯ ಎಳೆ ಹತ್ತಿಗೆ ರೂ. 8,110 ದರವನ್ನು ಘೋಷಿಸಿದೆ. ರೈತರು ಇದರ ಪ್ರಯೋಜನ ಪಡೆಯಬೇಕೆಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ರೈತರ ಆರ್ಥಿಕ ಹಿತದೃಷ್ಟಿಯಿಂದ ಭಾರತೀಯ ಹತ್ತಿ ನಿಗಮದಿಂದ ಬೆಂಬಲ ಬೆಲೆ ಯೋಜನೆಯಡಿ ಸುಗಮವಾಗಿ ರೈತರ ನೋಂದಣಿಯನ್ನು ಡಿಜಿಟಲ್ ಮೂಲಕ ಕೈಗೊಳ್ಳುವ ಹಾಗೂ ನಿಗದಿತ ಸಮಯಕ್ಕೆ ಮಾರಾಟ ಮಾಡಿದ ಹತ್ತಿಯ ಪ್ರಮಾಣಕ್ಕನುಗುಣವಾಗಿ ಡಿ.ಬಿ.ಟಿ ಮೂಲಕ ರೈತರಿಗೆ ಹಣ ಪಾವತಿಯಾಗಲು ಅನುಕೂಲವಾಗುವಂತೆ ಕಪಾಸ್ ಕಿಸಾನ್ ಎಂಬ ಮೊಬೈಲ್ ಆ್ಯಪ್ ಸಿದ್ಧಪಡಿಸಲಾಗಿದೆ. ಈ ಮೊಬೈಲ್ ಆ್ಯಪ್ ಮೂಲಕ ರೈತರು ಅಕ್ಟೋಬರ್ 31, 2025ರವರೆಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ.

> ಕನಿಷ್ಠ ಬೆಂಬಲ ಬೆಲೆ (ಎಮ್‌ಎಸ್‌ಪಿ) ಯೋಜನೆಯಡಿಯಲ್ಲಿ ಈಗಾಗಲೇ ರೈತರ ಸ್ವಯಂ ನೋಂದಣಿಯನ್ನು ಸೆ. 1ರಿಂದ ಆರಂಭಿಸಿದ್ದು, ಅಕ್ಟೋಬರ್ 31ರವರೆಗೆ ವಿಸ್ತರಿಸಲಾಗಿದೆ. ಭಾರತೀಯ ಹತ್ತಿ ನಿಗಮ (ಸಿಸಿಐ) ಇವರಿಗೆ ಹತ್ತಿ ಉತ್ಪನ್ನ ಮಾರಾಟ ಮಾಡಲು ಕಪಾಸ್ ಕಿಸಾನ್ ಮೊಬೈಲ್ ಆ್ಯಪ್ ಮೂಲಕ ರೈತರು ಸ್ವಯಂ ನೋಂದಾಯಿಸಿಕೊಳ್ಳಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಹತ್ತಿ ಬೆಳೆಯುವ ರೈತರಿಗೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸುಗಮವಾಗಿ ಹತ್ತಿ ಮಾರಾಟ ಮಾಡಲು ಅನುಕೂಲವಾಗುವಂತೆ ರೈತರ ನೋಂದಣಿಗಾಗಿ ಇ-ಆಡಳಿತ ಇಲಾಖೆಯಿಂದ ಎಪಿಐ ಅನ್ನು ಈಗಾಗಲೇ ಭಾರತಿಯ ಹತ್ತಿ ನಿಗಮದೊಂದಿಗೆ ಜೋಡಣೆ ಮಾಡಲಾಗಿದೆ. ಬೆಂಬಲ ಬೆಲೆ ಯೋಜನೆಯಡಿ ಹತ್ತಿ ಖರೀದಿ ನಿರ್ವಹಣೆಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಕಾರ್ಯದರ್ಶಿ, ಸಿಸಿಐ ಅಧಿಕಾರಿಗಳು, ಕೃಷಿ ಇಲಾಖೆ ಹಾಗೂ ಇತರೆ ಸ್ಥಳಿಯ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗಿದೆ.

ಯಾವುದೇ ತಾಂತ್ರಿಕ ದೋಷ, ನ್ಯೂನತೆಗಳಿಗೆ ಆಸ್ಪದ ನೀಡದೇ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಯೋಜನೆಯ ಪ್ರಯೋಜನ ಪಡೆಯಲು ಕ್ರಮ ವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ನಾಯಿಗಳ ಮಾಲೀಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ನಾಯಿಗಳ ಮಾಲೀಕರಿಗೆ ತಿಳಿಯಪಡಿಸುವುದೇನೆಂದರೆ, ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದಾಗಿ ನಗರಸಭೆ ಕಾರ್ಯಾಲಯಕ್ಕೆ ಸಾಕಷ್ಟು ಸಾರ್ವಜನಿಕ ದೂರುಗಳು ಸ್ವೀಕೃತವಾಗಿವೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಬೀದಿ ನಾಯಿಗಳ ಸಂಖ್ಯೆ ಕಡಿಮೆಗೊಳಿಸುವ ಸಂಬಂಧ ನಗರಸಭೆ 03-10-2025ರಂದು ಸದರ ಬೀದಿ ನಾಯಿಗಳನ್ನು ಹಿಡಿದು ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆ ಮಾಡಲು ತೀರ್ಮಾನಿಸಿ ಠರಾವು ಹೊರಡಿಸಿದೆ.

ಅದರಂತೆ ಗದಗ-ಬೆಟಗೇರಿ ನಗರಸಭೆ ವತಿಯಿಂದ ಟೆಂಡರ್ ಕರೆದು, ಬೀದಿ ನಾಯಿಗಳನ್ನು ಹಿಡಿದು ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆ ಕಾರ್ಯವನ್ನು ತುರ್ತಾಗಿ ಪ್ರಾರಂಭಿಸಲಿದೆ. ನಾಯಿಗಳ ಮಾಲೀಕರು ತಮ್ಮ ನಾಯಿಗಳನ್ನು ಬೀದಿಯಲ್ಲಿ ಬಿಟ್ಟ ಪಕ್ಷದಲ್ಲಿ ಸದರಿ ನಾಯಿಗಳನ್ನು ಅಕ್ಟೋಬರ್ 25ರ ಒಳಗಾಗಿ ತಮ್ಮ ತಾಬಾಕ್ಕೆ ತೆಗೆದುಕೊಳ್ಳಬೇಕು. ತಪ್ಪಿದ್ದಲ್ಲಿ ಮುಂದೆ ಆಗುವ ಹಾನಿಗಳಿಗೆ ಗದಗ-ಬೆಟಗೇರಿ ನಗರಸಭೆ ಜವಬ್ದಾರಿಯಾಗಿರುವುದಿಲ್ಲ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಅರ್ಜಿ ಸಲ್ಲಿಸಲು ನ.6 ಕೊನೆಯ ದಿನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆ-2026 ನಡೆಯಲಿದ್ದು, ಈ ಕುರಿತು ಮತದಾರರ ಪಟ್ಟಿ ತಯಾರಿಕೆ ಸಂಬಂಧವಾಗಿ ಪದವಿ ಪೂರ್ಣಗೊಂಡು 3 ವರ್ಷವಾದ ಪದವೀಧರರಿಂದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರ್ಪಡಿಸುವ ಕುರಿತು ಅರ್ಜಿ ನಮೂನೆ-18ನ್ನು ಮುಳಗುಂದ ಪಟ್ಟಣ ಪಂಚಾಯಿತಿ ಕಾರ್ಯಾಲಯದಿಂದ ಪಡೆದುಕೊಂಡು ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ಹಾಗೂ ಉಪ ವಿಭಾಗಧಿಕಾರಿಗಳು, ಗದಗ ವಿಭಾಗ ಗದಗ ಇಲ್ಲಿಗೆ ಸಲ್ಲಿಸಲು ತಿಳಿಸಲಾಗಿದೆ. ಭರ್ತಿ ಮಾಡಿದ ನಮೂನೆಗಳನ್ನು ಸಲ್ಲಿಸಲು ನವೆಂಬರ್-06 ಕೊನೆಯ ದಿನವಾಗಿದೆ.

ನಿಗದಿತ ನಮೂನೆ ಜೊತೆಗೆ ಅರ್ಜಿ ನಮೂನೆ-18, ಪದವಿ ಪೂರ್ಣಗೊಂಡ ಘಟಿಕೋತ್ಸವ ಪ್ರಮಾಣ ಅಥವಾ ಪದವಿ ಪೂರ್ಣಗೊಂಡ ಪಾಸಿಂಗ್ ಪ್ರಮಾಣ ಪತ್ರ (ದೃಢೀಕೃತ), ಆಧಾರ್ ಕಾರ್ಡ್ (ದೃಢೀಕೃತ), ಮತದಾರರ ಗುರುತೀನ ಚೀಟಿ (ದೃಢೀಕೃತ), ಮುಂಭಾಗದಿಂದ ಪೂರ್ಣ ಮುಖವು ಕಾಣುವ ಬಿಳಿ ಬಣ್ಣದ ಹಿನ್ನೆಲೆ ಹೊಂದಿರುವ ಸಹಿ ಮಾಡದ ಇತ್ತೀಚಿನ ಬಣ್ಣದ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (4.5 ಸೆಂ.ಮೀ ಥ 3.50 ಸೆಂ.ಮೀ) ಲಗತ್ತಿಸಬೇಕೆಂದು ಮುಳಗುಂದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 08372-251125 ಸಂಪರ್ಕಿಸಬಹುದಾಗಿದೆ.

## ಕರಾವಳಿಯಲ್ಲಿ ವರುಣಾರ್ಭಟ: 27 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಣೆ!



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕದ ಕರಾವಳಿ ಭಾಗದಲ್ಲಿ ಇಂದು ವರುಣ ಅಬ್ಬರಿಸಲಿದ್ದು, 3 ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

27 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಇರಲಿದೆ. ಕಳೆದ ಎರಡು ಮೂರು ದಿನಗಳಿಂದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವರುಣ ಅಬ್ಬರಿಸುತ್ತಿದ್ದು, ಇದು ಇನ್ನೂ ಕೆಲ ದಿನ ಮುಂದುವರಿಯುವ ನಿರೀಕ್ಷೆ ಇದೆ. ಉತ್ತರ ಕನ್ನಡ ಜಿಲ್ಲೆಯಲ್ಲೂ ಶುಕ್ರವಾರ ಉತ್ತಮ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕರಾವಳಿ ಜಿಲ್ಲೆಗಳಲ್ಲಿ ಇಂದು ಗುಡುಗು ಸಹಿತ ಭಾರಿ ಮಳೆಯ ನಿರೀಕ್ಷೆ ಇದೆ. ಗಾಳಿಯ ವೇಗ ಗಂಟೆಗೆ 30-40 ಕಿ.ಮೀ. ಇರಲಿದ್ದು, ಪ್ರವಾಹ ಮತ್ತು ಗುಡ್ಡ ಪ್ರದೇಶದಲ್ಲಿ ಭೂಕುಸಿತವಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡು ಭಾಗದ ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರಮ ಮಂಡ್ಯ, ಮೈಸೂರು, ಕೋಲಾರ, ತುಮಕೂರು, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಚಾಮರಾಜನಗರ, ಚಿಕ್ಕಬಳ್ಳಾಪುರ, ರಾಮನಗರದಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಸಾಧಾರಣ ಮಳೆಯಾಗಲಿದೆ. ಉತ್ತರ ಒಳನಾಡು ಜಿಲ್ಲೆಗಳಾದ ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಬಾಗಲಕೋಟೆಮ ಕೊಪ್ಪಳ, ರಾಯಚೂರು, ವಿಜಯನಗರ, ಯಾದಗಿರಿ ಮತ್ತು ಬಳ್ಳಾರಿಯಲ್ಲಿ ಭಾರಿ ಪ್ರಮಾಣದ ಮಳೆಯನ್ನು ನಿರೀಕ್ಷಿಸಲಾಗಿದೆ. ಹಾವೇರಿಯ ಕೆಲವೆಡೆ ಪ್ರವಾಹದ ಸಾಧ್ಯತೆ ಇದೆ.

ಬೆಂಗಳೂರು ನಗರದಲ್ಲೂ ಶುಕ್ರವಾರ ಮಳೆಯಾಗುವ ಸಾಧ್ಯತೆ ಇದ್ದು, ಸಂಜೆ ವೇಳೆಗೆ ವರುಣ ಆರ್ಭಟಿಸಬಹುದು ಎಂದು ಅಂದಾಜಿಸಲಾಗಿದೆ. ಸಂಜೆ 5ರಿಂದ ರಾತ್ರಿ 8ಗಂಟೆ ನಡುವೆ ಮಳೆಯನ್ನು ನಿರೀಕ್ಷಿಸಲಾಗಿದೆ. ಬೆಳಗ್ಗೆ ಮತ್ತು ಮಧ್ಯಾಹ್ನ ಮೋಡ ಕವಿದ ವಾತಾವರಣ ಇರುವ ಸಾಧ್ಯತೆ ಇದ್ದು, ಗಾಳಿಯ ವೇಗ ಗಂಟೆಗೆ 14-24 ಕಿ.ಮೀ. ಇರಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

## ಕೃಷಿ ಯಂತ್ರಧಾರೆ ಕೇಂದ್ರದ ಹಸ್ತಾಂತರಕ್ಕಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಸರ್ಕಾರಿ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಡಿ ಸ್ಥಾಪಿಸಲಾಗಿದೆ. ಅಮ್ಮಿನಭಾವಿ ಕೃಷಿ ಯಂತ್ರಧಾರೆ ಕೇಂದ್ರವನ್ನು ನಿರ್ವಹಿಸುತ್ತಿದ್ದ ಸೇವಾಧಾರ ಸಂಸ್ಥೆಯವರ ಒಡಂಬಡಿಕೆ ಅವಧಿ ಮುಕ್ತಾಯವಾಗಿದ್ದು, ಕೃಷಿ ಯಂತ್ರಧಾರೆ ಕೇಂದ್ರವನ್ನು ಹಸ್ತಾಂತರಿಸಲು ನೋಂದಾಯಿತ ರೈತ ಉತ್ಪಾದಕ ಸಂಸ್ಥೆಗಳು, ಆಸಕ್ತಿಯುಳ್ಳ ಇತರೇ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.


ರೈತ ಉತ್ಪಾದಕ ಸಂಸ್ಥೆಗಳಿಗೆ ರೂ. 0.50 ಲಕ್ಷಗಳು ಹಾಗೂ ಇತರೆ ಸಂಸ್ಥೆಗಳಿಗೆ ರೂ. 1 ಲಕ್ಷಗಳ ಇಎಮ್‌ಡಿಯನ್ನು ಸಂಬಂಧಿಸಿದ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರ ಹೆಸರಲ್ಲಿ 9 ವರ್ಷಗಳ ಅವಧಿಗೆ ಬ್ಯಾಂಕ್ ಗ್ಯಾರಂಟಿಯನ್ನು ಪಡೆಯುವುದು ಹಾಗೂ 9 ವರ್ಷಗಳ ಒಡಂಬಡಿಕೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ ಆಸಕ್ತ ಸಂಸ್ಥೆಯವರು ಅಕ್ಟೋಬರ್ 29ರೊಳಗೆ ಅರ್ಜಿಯನ್ನು ನೇರವಾಗಿ ಧಾರವಾಡ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಪ್ರಕಟಣೆ ತಿಳಿಸಿದೆ.

## ಪದವಿ ಪಠ್ಯ-ಪುಸ್ತಕ ಮಾರಾಟಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಶ್ವವಿದ್ಯಾಲಯ ಪ್ರಸಾರಾಂಗ ವಿಭಾಗದಿಂದ ಪ್ರತಿ ವರ್ಷ ಪ್ರಕಟವಾಗುತ್ತಿರುವ ಕನ್ನಡ ಪದವಿ ತರಗತಿಗಳ ಪಠ್ಯ-ಪುಸ್ತಕಗಳನ್ನು ಮಾರಾಟ ಮಾಡಲು ಅಧೀಕೃತ ಏಜೆಂಟರುಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಏಜೆಂಟರು, ಮಾರಾಟಗಾರರು ನಿರ್ದೇಶಕರು ಪ್ರಸಾರಾಂಗ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ಅಕ್ಟೋಬರ್ 25ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ವಿಶ್ವವಿದ್ಯಾಲಯದ http. www.kud.ac.in ವೆಬ್‌ಸೈಟ್ ಹಾಗೂ ಪ್ರಸಾರಾಂಗ ವಿಭಾಗದ ಸಹಾಯಕ ನಿರ್ದೇಶಕರಾದ ಡಾ. ಸಿದ್ದಪ್ಪ ಎನ್-9480295866 ಸಂಪರ್ಕಿಸಬಹುದು ಎಂದು ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಹಬ್ಬ ತಂದ ಆಪತ್ತು: ಹೋರಿ ಬೆದರಿಸುವ ಸ್ಪರ್ಧೆಯಲ್ಲಿ 3 ಮಂದಿ ಬಲಿ!



**■ವಿಜಯಸಾಕ್ಷಿ ಸುದ್ದಿ, ಹಾವೇರಿ**


ಜಿಲ್ಲೆಯಾದ್ಯಂತ ಈ ಬಾರಿ ದೀಪಾವಳಿ ಹಬ್ಬ ದುರ್ಘಟನೆಯಾಗಿ ಮಾರ್ಪಟ್ಟಿದೆ. ಹೋರಿ ಬೆದರಿಸುವ ಸ್ಪರ್ಧೆಗಳ ಪ್ರತ್ಯೇಕ ಸ್ಥಳಗಳಲ್ಲಿ ಮೂವರು ಮೃತಪಟ್ಟಿದ್ದಾರೆ. ಹಾವೇರಿ, ದೇವಿಹೊಸೂರು ಮತ್ತು ತಿಳವಳ್ಳಿ ಗ್ರಾಮಗಳಲ್ಲಿ ನಡೆದ ಹೋರಿ ಬೆದರಿಸುವ ಸ್ಪರ್ಧೆಯಲ್ಲಿ ಈ ಘಟನೆಗಳು ನಡೆದಿವೆ.

ಹಾವೇರಿ ನಗರದ ಚಂದ್ರಶೇಖರ (70), ದೇವಿಹೊಸೂರು ಗ್ರಾಮದ ಮಹಮ್ಮದ್ ಹುಸೇನ್ (75) ಹಾಗೂ ತಿಳವಳ್ಳಿ ಗ್ರಾಮದ ಭರತ್ (24) ಮೃತಪಟ್ಟವರು.

ಹಾವೇರಿಯ ಹಳೆ ಪಿಬಿ ರಸ್ತೆಯಲ್ಲಿ ನಡೆದು ಹೋಗುತ್ತಿದ್ದ ವೇಳೆ ಚಂದ್ರಶೇಖರನ್ನು ಹೋರಿ ಗುದ್ದಿದೆ. ದೇವಿಹೊಸೂರಿನಲ್ಲಿ ಮೆರವಣಿಗೆಯ ವೇಳೆ ಕಟ್ಟೆಯ ಮೇಲೆ ಕುಳಿತಿದ್ದ ಮಹಮ್ಮದ್ ಹುಸೇನ್ ರನ್ನು ಹೋರಿ ಗುದ್ದಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯದಲ್ಲೇ ಮೃತಪಟ್ಟಿದ್ದಾರೆ.

ಇನ್ನೂ ತಿಳವಳ್ಳಿ ಗ್ರಾಮದಲ್ಲಿ ನಡೆದ ಹೋರಿ ಸ್ಪರ್ಧೆ ನೋಡಲು ಬಂದಿದ್ದ ಭರತ್ ನನ್ನು ಹೋರಿ ಎದೆ ಭಾಗಕ್ಕೆ ಗುದ್ದಿದ್ದು, ತೀವ್ರ ಗಾಯಗೊಂಡು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಚಿಕಿತ್ಸೆಗೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಒಂದೇ ದಿನದಲ್ಲಿ ಹಾವೇರಿ ಜಿಲ್ಲೆಯ ಮೂರು ಕಡೆಗಳಲ್ಲಿ ನಡೆದ ಈ ಘಟನೆಗಳಿಂದ ದೀಪಾವಳಿ ಸಂಭ್ರಮ ದುಃಖದಲ್ಲಿ ಅಂತ್ಯಗೊಂಡಿದೆ. ಪೊಲೀಸರು ಸ್ಥಳಕ್ಕೆ ಧಾವಿಸಿ ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

# ಸತೀಶ್ ಜಾರಕಿಹೊಳಿ ಸಿಎಂ ಆದ್ರೆ ನಮ್ಮ ಬೆಂಬಲವಿದೆ; ಶ್ರೀರಾಮುಲು



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸತೀಶ್ ಜಾರಕಿಹೊಳಿ ಸಿಎಂ ಆದರೆ ನಮ್ಮ ಬೆಂಬಲವಿದೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಬುಧವಾರ ಬೆಳಗಾವಿ ಜಿಲ್ಲೆಯ ರಾಯಭಾಗದಲ್ಲಿ ಸಿಎಂ ಸಿದ್ದರಾಮಯ್ಯ ಅವರ ರಾಜಕೀಯ ಉತ್ತರಾಧಿಕಾರಿ ಬಗ್ಗೆ ನೀಡಿದ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಭಾರಿ ಸಂಚಲನಕ್ಕೆ ಕಾರಣವಾಗಿದೆ.

ಈ ವಿಚಾರವಾಗಿ ನಗರದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಮಗ ಯತೀಂದ್ರ ಅವರು ಮುಂದಿನ ದಿನಗಳಲ್ಲಿ ಸತೀಶ್ ಜಾರಕಿಹೊಳಿ ಅವರಿಗೆ ಸಿಎಂ ಸ್ಥಾನಕ್ಕೆ ಅವಕಾಶ ಮಾಡಿಕೊಡುತ್ತೇವೆ ಎಂಬ ಅರ್ಥದಲ್ಲಿ ಮಾತನಾಡಿದ್ದಾರೆ. ವಾಲ್ಮೀಕಿ ಸಮುದಾಯಕ್ಕೆ ಸೇರಿದ ಸತೀಶ್ ಜಾರಕಿಹೊಳಿ ಸಿಎಂ ಆದರೆ ನಮ್ಮ ಬೆಂಬಲವಿದೆ. ಪಕ್ಷದಲ್ಲಿ ಅವರು ದುಡಿದಿದ್ದಾರೆ. ಅವಕಾಶ ಸಿಕ್ಕಲ್ಲಿ ಸಿಎಂ ಆದರೆ ನಮಗೆ ಸಂತೋಷವಿದೆ ಎಂದರು.

ರಾಜ್ಯದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ನಿರ್ಮಾಣವಾಗಿದೆ. 1975ರಲ್ಲಿ ಇಂದಿರಾಗಾಂಧಿ ತಮ್ಮ ವಿರುದ್ಧ ಯಾರಾದರೂ ಮಾತನಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳುತ್ತಿದ್ದರು. ಅದೇ ರೀತಿಯಲ್ಲಿ ಇಂದು ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಘೋಷಿತ ತುರ್ತು ಪರಿಸ್ಥಿತಿ ಜಾರಿ ಮಾಡಿದೆ. ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಶ್ರೀರಾಮುಲು ಕಿಡಿಕಾರಿದ್ದಾರೆ.

## ಬಸವ ಭವನದಲ್ಲಿ ತೋಂಟದ ಶ್ರೀಗಳ 7ನೇ ಪುಣ್ಯಸ್ಮರಣೋತ್ಸವ

# ಸಿದ್ಧಲಿಂಗಶ್ರೀಗಳು ಮನುಕುಲದ ಬೆಳಕು

■ ವಿಜಯಸಾಕ್ಷಿ ಸುದ್ದಿ, ಗದಗ

ನಾಡು-ನುಡಿ, ನೆಲ-ಜಲ, ಭಾಷೆ-ಧರ್ಮಗಳಿಗೆ ಚ್ಯುತಿ ಬಂದಾಗಲೆಲ್ಲ ಅವುಗಳ ಶ್ರೇಯೋಭಿವೃದ್ಧಿಯ ಹೋರಾಟಕ್ಕಾಗಿ ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಮೊದಲು ಮುನ್ನುಗ್ಗುತ್ತಿದ್ದರು. ಗೋಕಾಕ ಚಳುವಳಿ, ನಂಜುಂಡಪ್ಪ ವರದಿ ಜಾರಿ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನಕ್ಕಾಗಿ ಶ್ರೀಗಳ ಹೋರಾಟ ಶ್ರಮದಿಂದ ಇಂದು ಕನ್ನಡಕ್ಕೆ ಹೆಚ್ಚಿನ ಮಾನ್ಯತೆ ದೊರೆತಿದೆ. ಗದಗ ಜಿಲ್ಲೆಗೆ ಪೋಸ್ಕೋ ಕಂಪನಿ ಬಾರದಂತೆ ಶ್ರೀಗಳು ಹೋರಾಟ ಮಾಡಿದ್ದರ ಫಲವಾಗಿ ಕಪ್ಪತ್ತಗುಡ್ಡ ಸಂರಕ್ಷಣೆಯಾಗಿ ಇಂದು ನಾವೆಲ್ಲ ಶುದ್ಧಗಾಳಿ ಸೇವಿಸುತ್ತಿದ್ದೇವೆ. ಈ ನಿಟ್ಟಿನಲ್ಲಿ ಮನುಕುಲದ ಬೆಳಕು, ಲಿಂಗಾಯತ ಧರ್ಮದ ಮಹಾ ದಂಡನಾಯಕ ಪೂಜ್ಯ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಎಂದು ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ತಿಳಿಸಿದರು.



ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ ಗದಗ ಸಂಸ್ಥೆಯ ಸಿದ್ಧಲಿಂಗ ನಗರದಲ್ಲಿನ ಬಸವ ಪ್ರಭೆ ಕ್ಯಾಂಪಸ್‌ನಲ್ಲಿರುವ ಬಸವ ಭವನದಲ್ಲಿ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 7ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ತೋಂಟದ ಸಿದ್ಧಲಿಂಗ ಶ್ರೀಗಳ ಒಡನಾಟದಲ್ಲಿದ್ದಾಗಿನ ಅನೇಕ ಸಂಗತಿಗಳನ್ನು ಸಭೆಯಲ್ಲಿ ಹಂಚಿಕೊಂಡು, 'ತ್ರಿವಿಧ ದಾಸೋಹ' ಪದದರ್ಥವನ್ನು ಅರ್ಥೈಸಿಕೊಂಡು ಕೃತಿ ಮೂಲಕ ಜನತೆಗೆ ಅರ್ಥೈಸಿದವರಲ್ಲಿ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಅಗ್ರಮಾನ್ಯರಾಗಿದ್ದಾರೆ. ಇಂದು ಶ್ರೀಮಠದಲ್ಲಿ ನಡೆಯುತ್ತಿರುವ ಅನ್ನದಾಸೋಹ, ಶ್ರೀಮಠದ ವಿವಿಧ ಶಿಕ್ಷಣ ಸಂಸ್ಥೆಗಳಿಂದ ನಡೆಯುತ್ತಿರುವ ಅಕ್ಷರ ದಾಸೋಹ, ಶ್ರೀಮಠದ ಯೋಗ ಪಾಠಶಾಲೆಯಿಂದ ದಿನನಿತ್ಯ ನಡೆಯುತ್ತಿರುವ ಯೋಗ ತರಬೇತಿ ವರ್ಗಗಳಿಂದ ಆರೋಗ್ಯ ದಾಸೋಹ ಸೇವೆಗಳು ಅನ್ನ, ಅಕ್ಷರ, ಆರೋಗ್ಯ ಎಂಬ ತ್ರಿವಿಧ ದಾಸೋಹ ಪದಕ್ಕೆ ನಿದರ್ಶನಗಳಾಗಿವೆ. ಪೂಜ್ಯಸಿದ್ಧಲಿಂಗ ಶ್ರೀಗಳ ಸಂಕಲ್ಪಗಳನ್ನು ಯಶ್ವಿಸಿಗೊಳಿಸಲು ನಾವೆಲ್ಲ ಶ್ರಮಿಸಿದ್ದಾದರೆ ನಿತ್ಯವೂ ಅವರನ್ನು ಸ್ಮರಿಸಿದಂತಾಗುವದೆಂದು ಹೇಳಿದರು.

ಇತ್ತೀಚೆಗೆ 'ಬಸವ ಸಂಸ್ಕೃತಿ ಅಭಿಯಾನ'ದಲ್ಲಿ ಸಿದ್ಧಲಿಂಗ ಶ್ರೀಗಳ ಮತ್ತು ಇಲಕಲ್ ಮಹಾಂತಪ್ಪಗಳ ಹೆಸರನ್ನು ಪ್ರಸ್ತಾಪಿಸದಿರುವುದು ನೋವಿನ ಸಂಗತಿಯಾಗಿದೆ. ಕಾರಣ 'ಲಿಂಗಾಯತ' ಒಂದು ಸ್ವತಂತ್ರ ಧರ್ಮ. ಅದು ಅಲ್ಪಸಂಖ್ಯಾತರ ಧರ್ಮ ಎಂಬ ಹೋರಾಟಕ್ಕೆ ಕಾರಣೀಕರ್ತರಾದವರು ಇಲಕಲ್ಲ ಮಹಾಂತಪ್ಪಗಳು ಮತ್ತು ಗದುಗಿನ ತೋಂಟದ ಸಿದ್ಧಲಿಂಗ ಸ್ವಾಮಿಗಳು. ಹೀಗಾಗಿ ಇವರೀರ್ವರ ಸ್ಮರಣೆ ಸದಾ ಇರಬೇಕೆಂಬುದು ನನ್ನ ಆಶಯವಾಗಿದೆ. ತಮ್ಮೆಲ್ಲರ ಭಾವ ಕೂಡ ಇದಾಗಬೇಕೆಂದು ಶಿವನಗೌಡ ಗೌಡರ ವಿನಂತಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಯೋಗ ಪಾಠಶಾಲೆಯ ಅಭಿವೃದ್ಧಿ ಸೇವಾ ಸಮಿತಿ ಸದಸ್ಯರಾದ ಡಾ. ಎಂ.ವಿ. ಐಹೊಳ್ಳಿ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಕೋಶಾಧ್ಯಕ್ಷೆ ಜಯಶ್ರೀ ದಾವಣಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪೂಜ್ಯರ ಅಭಿಮಾನಿ ಭಕ್ತವೃಂದ, ನಿತ್ಯ ಯೋಗಾಭ್ಯಾಸಿ ವಿದ್ಯಾರ್ಥಿಗಳು, ಯೋಗ ಪಾಠಶಾಲೆಯ ಸದಸ್ಯರು ಪಾಲ್ಗೊಂಡಿದ್ದರು.

ಬಸವೇಶ್ವರ ಕನ್ನಡ ಮಾಧ್ಯಮ ಪ್ರೌಢಶಾಲೆಯ ಸಹ ಶಿಕ್ಷಕರಾದ ಬಿ.ಬಿ. ಇಬ್ರಾಹಿಂಪೂರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ರೈಲ್ವೆ ಸಿಬ್ಬಂದಿಯ ಸಮಯ ಪ್ರಜ್ಞೆಯಿಂದ ತಪ್ಪಿದ ಭಾರೀ ಅನಾಹುತ!

■ ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಕಳೆದ ನಾಲ್ಕು ದಿನಗಳಿಂದ ಮಲೆನಾಡು ಮತ್ತು ಬಯಲುಸೀಮೆ ಭಾಗದಲ್ಲಿ ಧಾರಾಕಾರ ಮಳೆಯಿಂದ ಚಿಕ್ಕಮಗಳೂರು ತಾಲೂಕಿನ ಕಣಿವೆ ಹಳ್ಳಿಯಲ್ಲಿ ರೈಲ್ವೆ ಹಳಿ ಲಯ ತಪ್ಪಿ, ಹಳಿಗೆ ಹಾಕಿದ್ದ ಜಲ್ಲಿ ಕಲ್ಲುಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದವು.

ಬುಧವಾರ ರಾತ್ರಿಯ ಮಳೆಯಿಂದ ಕಾಲುವೆಯ ನೀರು ಹರಿದ ಪರಿಣಾಮ ಈ ಹಳಿ ಹಾಳಾಗಿತ್ತು. ಗುರುವಾರ ಬೆಳಿಗ್ಗೆ ಚಿಕ್ಕಮಗಳೂರಿನಿಂದ ಶಿವಮೊಗ್ಗ ಕಡೆಗೆ ಹೊರಟಿದ್ದ ಪ್ಯಾಸೆಂಜರ್ ರೈಲು ಕಣಿವೆ ಹಳ್ಳಿಗೆ ತಲುಪುತ್ತಿದ್ದಂತೆ, ರೈಲ್ವೆ ಸಿಬ್ಬಂದಿ ತಕ್ಷಣ ಲೋಕೋಪೈಲಟ್‌ಗೆ ತುರ್ತು ಮಾಹಿತಿ ನೀಡಿದ್ದಾರೆ. ಸಮಯಪ್ರಜ್ಞೆಯಿಂದ ರೈಲು ನಿಲ್ಲಿಸಿದ ಕಾರಣ, ಸಂಭವಿಸಬಹುದಿದ್ದ ದೊಡ್ಡ ಅಪಘಾತ ತಪ್ಪಿಸಿಕೊಳ್ಳಲಾಗಿದೆ.

ತುರ್ತು ದುರಸ್ತಿ ಕಾರ್ಯದ ಬಳಿಕ ರೈಲು ಶಿವಮೊಗ್ಗದತ್ತ ಪ್ರಯಾಣ ಮುಂದುವರಿಸಿತು. ಹಳಿಯ ಪಕ್ಕದಲ್ಲೇ ನೀರಿನ ಹರಿವಿನ ಪ್ರಮಾಣ ಹೆಚ್ಚಾಗಿದ್ದ ಕಾರಣ, ರೈಲ್ವೆ ಸಿಬ್ಬಂದಿಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ.

# ಡೀಪ್‌ಫೇಕ್ ದುರುಪಯೋಗ ತಡೆಗಟ್ಟಲು ಎಐ ಮೇಲೆ ನಿಯಂತ್ರಣ ಕೋರಿ ಸುಪ್ರೀಂ ಕೋರ್ಟ್‌ಗೆ ಪಿಐಎಲ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೃತಕ ಬುದ್ಧಿಮತ್ತೆ (ಎಐ) ವ್ಯವಸ್ಥೆಗಳಿಗೆ, ವಿಶೇಷವಾಗಿ ನೈಜ ವ್ಯಕ್ತಿಗಳ ಸಂಶ್ಲೇಷಿತ ಚಿತ್ರಗಳು, ವಿಡಿಯೋಗಳು ಮತ್ತು ಆಡಿಯೊ ಅನುಕರಣೆಗಳನ್ನು ಸೃಷ್ಟಿಸುವ ಸಾಮರ್ಥ್ಯವಿರುವ ವ್ಯವಸ್ಥೆಗಳಿಗೆ ಸಮಗ್ರ ನಿಯಂತ್ರಕ ಮತ್ತು ಪರವಾನಗಿ ಚೌಕಟ್ಟನ್ನು ರೂಪಿಸಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.

ವಕೀಲೆ ಆರತಿ ಸಹಾ ಎಂಬವರು ಸಲ್ಲಿಸಿರುವ ಅರ್ಜಿಯಲ್ಲಿ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ (ಎಂಇಐಟಿ) ಮತ್ತು ದೂರಸಂಪರ್ಕ ಇಲಾಖೆ (ಡಿಒಟಿ) ಗೆ ಎಐ ತಂತ್ರಜ್ಞಾನಗಳ ಜವಾಬ್ದಾರಿಯುತ ಬಳಕೆಗಾಗಿ ಶಾಸನಬದ್ಧ ಕಾರ್ಯವಿಧಾನವನ್ನು ರೂಪಿಸಲು ಮತ್ತು ಮೆಟಾ ಪ್ಲಾಟ್‌ಫಾರ್ಮ್‌ಗಳು, ಗೂಗಲ್‌ನಂತಹ ಡಿಜಿಟಲ್ ಮಧ್ಯವರ್ತಿಗಳು ಅವುಗಳನ್ನು ಪಾಲಿಸಲು ಆದೇಶ ಹೊರಡಿಸುವಂತೆ ನ್ಯಾಯಾಲಯವನ್ನು ಕೋರಲಾಗಿದೆ.

ಅರ್ಜಿಯ ಪ್ರಕಾರ, ಡೀಪ್‌ಫೇಕ್‌ಗಳು ಎಂದು ಜನಪ್ರಿಯವಾಗಿ ಕರೆಯಲ್ಪಡುವ ಎಐ-ರಚಿತ ವಿಷಯದ ಅನಿಯಂತ್ರಿತ ಹರಡುವಿಕೆಯು ಗೌಪ್ಯತೆ, ಘನತೆ ಮತ್ತು ಖ್ಯಾತಿಯ ಗಂಭೀರ ಉಲ್ಲಂಘನೆಗೆ ಕಾರಣವಾಗಿದೆ.

# ವ್ಯಕ್ತಿ ನಾಪತ್ತೆ: ಪತ್ತೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ತಾಲೂಕಿನ ನರೇಗಲ್ಲ ಹೋಬಳಿಯ ಸುರೇಶ ತಂದೆ ಬಸನಗೌಡ ಮದ್ದೂರ (32 ವರ್ಷ) ಇವನು ದಿನಾಂಕ 18-2-2017ರಂದು ಮುಂಜಾನೆ 8 ಗಂಟೆಯಿಂದ 14 ಗಂಟೆಯ ನಡುವಿನ ಅವಧಿಯಲ್ಲಿ ನರೇಗಲ್ಲ ಪಟ್ಟಣದ ತನ್ನ ಮನೆಯಿಂದ ಯಾರಿಗೂ ಹೇಳದೇ ಕೇಳದೇ ಎಲ್ಲಿಗೋ ಹೋಗಿ ಕಾಣೆಯಾಗಿದ್ದು, ಈವರೆಗೂ ಸಿಕ್ಕಿರುವುದಿಲ್ಲ ಎಂದು ಪೊಲೀಸ್ ಠಾಣೆಯಲ್ಲಿ ತಡವಾಗಿ ಪ್ರಕರಣ ದಾಖಲಾಗಿದೆ.



**ನಾಪತ್ತೆಯಾದ ವ್ಯಕ್ತಿಯ ವಿವರ:** ಎತ್ತರ-ಸುಮಾರು 05 ಅಡಿ 02 ಇಂಚು, ಮೈಯಿಂದ ಸಾಧಾರಣ, ಸಾದಗೆಂಪು ಮೈಬಣ್ಣ, ದುಂಡು ಮುಖ, ತಲೆಯಲ್ಲಿ ಕಪ್ಪು ಕೂದಲು, ಮತ್ತು ಕಿರಿದಾದ ಮೂಗು ಇರುತ್ತದೆ. ಕನ್ನಡ ಮಾತನಾಡುತ್ತಾನೆ. ನಾಪತ್ತೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಅರ್ಧ ತೋಳಿನ ಅಂಗಿ ಹಾಗೂ ನೀಲಿ ಪ್ಯಾಂಟ್ ಧರಿಸಿರುತ್ತಾನೆ.

ಈ ಮೇಲಿನ ಚಹರೆಯುಳ್ಳ ಮನುಷ್ಯನ ಬಗ್ಗೆ ಮಾಹಿತಿ ದೊರೆತಲ್ಲಿ ಕೂಡಲೇ ನರೇಗಲ್ಲ ಪೊಲೀಸ್ ಠಾಣೆಗೆ ಇಲ್ಲವೇ ಗದಗ ಜಿಲ್ಲಾ ಪೊಲೀಸ್ ಕಚೇರಿಗೆ ಸಂಪರ್ಕಿಸಬಹುದಾಗಿದೆ.

ಗದಗ ಕಂಟ್ರೋಲ್ ರೂಂ-9480804400; ಡಿಎಸ್‌ಪಿ ನರಗುಂದ ಉಪ ವಿಭಾಗ ಮೊ.ನಂ.-9480804408, ಸಿಪಿಐ ರೋಣ ಮೊಬೈಲ್ ನಂ-9480804434, ಪಿಎಸ್‌ಐ ನರೇಗಲ್ಲ ಪೊಲೀಸ್ ಠಾಣೆ -0831-268233, 9480804454 ಇಲ್ಲಿಗೆ ಮಾಹಿತಿ ನೀಡಲು ಪೊಲೀಸ್ ಪ್ರಕಟಣೆ ಕೋರಿದೆ.

## ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿ.ಪಂ ಸಿಇಓ ಭುವನೇಶ ಪಾಟೀಲ

# ಪೊಲೀಸರ ಬಲಿದಾನ ಸ್ಮರಿಸುವುದು ನಮ್ಮ ಜವಾಬ್ದಾರಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಮಾಜದಲ್ಲಿ, ಆಡಳಿತದಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ವ್ಯವಸ್ಥೆ ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಪೊಲೀಸ್ ಅಧಿಕಾರಿ, ಸಿಬ್ಬಂದಿಗಳ ತ್ಯಾಗ, ಬಲಿದಾನವನ್ನು ಸ್ಮರಿಸುವುದು ಮತ್ತು ಹುತಾತ್ಮರಾದ ಪೊಲೀಸ್ ಸಿಬ್ಬಂದಿಗಳ ಕುಟುಂಬಗಳಿಗೆ ಬೆಂಬಲ, ಸಹಕಾರ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಪೊಲೀಸ್ ಹೆಡ್ ಕ್ವಾರ್ಟರ್ಸ್‌ನಲ್ಲಿ ಧಾರವಾಡ ಜಿಲ್ಲಾ ಪೊಲೀಸ್ ಇಲಾಖೆಯಿಂದ ಆಯೋಜಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಸಮಾಜದ ಸಂರಕ್ಷಣೆ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿ ರಕ್ಷಣೆಯಲ್ಲಿ ತಮ್ಮ ಪ್ರಾಣ ತ್ಯಾಗ ಮಾಡುವ ಹಾಗೂ ದೈಹಿಕವಾಗಿ ಊನರಾಗುವ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ, ಅವರ ಕುಟುಂಬಗಳಿಗೆ ಪ್ರತಿಯೊಬ್ಬರೂ ಬೆಂಬಲ ನೀಡಿ ಗೌರವಿಸಬೇಕು. ಪೊಲೀಸರ ತ್ಯಾಗ, ಬಲಿದಾನಗಳನ್ನು ಸ್ಮರಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪೊಲೀಸ್ ಕುಟುಂಬದ ಸದಸ್ಯರಿಗೂ ನಮ್ಮ ಕೃತಜ್ಞತೆ ತಿಳಿಸಬೇಕಾಗುತ್ತದೆ. ಕುಟುಂಬದವರ ಸಹಕಾರ, ಬೆಂಬಲ, ಪ್ರೇರಣೆ, ಪ್ರೋತ್ಸಾಹಗಳಿಂದಲೇ ಪೊಲೀಸರು ನೆಮ್ಮದಿಯಿಂದ, ತೃಪ್ತಿಯಿಂದ ಕರ್ತವ್ಯ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ಭುವನೇಶ ಪಾಟೀಲ ತಿಳಿಸಿದರು.

ವಿಶೇಷ ಆಹ್ವಾನಿತರಾಗಿದ್ದ ಧಾರವಾಡ ಐಐಟಿ ನಿರ್ದೇಶಕ ಪ್ರೊ. ವೆಂಕಪ್ಪಯ್ಯ ದೇಸಾಯಿ ಮಾತನಾಡಿ, ಸಮಾಜಕ್ಕೆ ಪ್ರಾಮಾಣಿಕ ಸೇವೆ ಸಲ್ಲಿಸುವುದು ಎಲ್ಲ ನಾಗರಿಕರ ಜವಾಬ್ದಾರಿಯಾಗಿದೆ. ಸಮಾಜದ ರಕ್ಷಣೆ, ಶಾಂತಿ ಕಾಪಾಡುವುದು ಕೇವಲ ಪೊಲೀಸ್ ಅಧಿಕಾರಿಗಳ, ಸಿಬ್ಬಂದಿಗಳ ಹೊಣೆಗಾರಿಕೆ ಆಗಬಾರದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಪೊಲೀಸ್ ಹುತಾತ್ಮರ ನಾಮಸ್ಮರಣೆ ಮಾಡಿದರು. ಕಾರ್ಯಕ್ರಮದಲ್ಲಿ ಪೊಲೀಸ್ ತರಬೇತಿ ಶಾಲೆಯ ಪ್ರಾಂಶುಪಾಲ ಎಂ.ಎಂ. ಯಾದವಾಡ, ಸಿಇಎನ್ ಡಿಎಸ್ಪಿ ಶಿವಾನಂದ ಕಟಗಿ, ಧಾರವಾಡ ಗ್ರಾಮೀಣ ಉಪವಿಭಾಗದ ಡಿಎಸ್‌ಪಿ ವಿನೋದ ಮುಕ್ತೇದಾರ, ಡಿಎಆರ್ ಡಿಎಸ್‌ಪಿ ಡಿ.ಎಸ್. ಧನಗರ, ಲೋಕಾಯುಕ್ತ ಪೊಲೀಸ್ ಉಪ ಅಧೀಕ್ಷಕ ವೆಂಕನಗೌಡ ಪಾಟೀಲ, ಐಎಸ್‌ಡಿ ಘಟಕದ ಡಿಎಸ್‌ಪಿ ವೇಣುಗೋಪಾಲ, ಜಿಲ್ಲಾ ಪೊಲೀಸ್ ಕಚೇರಿಯ ಸಹಾಯಕ ಆಡಾಳಿತಾಧಿಕಾರಿ ಎಂ.ಎಸ್. ಹಿರೇಮಠ ಮುಂತಾದವರಿದ್ದರು.

ಪರೇಡ್ ಕಮಾಂಡರ್ ವಿಠ್ಠಲ ಆರೇರ ನೇತೃತ್ವದಲ್ಲಿ ಎಸ್. ಕುರಗೋಡ ಮತ್ತು ಜಿ.ಎಲ್. ಜಂಜೂರಿ ಅವರ ಡಿಎಆರ್ ಪೊಲೀಸ್ ತಂಡಗಳಿಂದ ಗೌರವ ಸಮರ್ಪಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಹುತಾತ್ಮ ಪೊಲೀಸ್ ಸಿಬ್ಬಂದಿ-ಅಧಿಕಾರಿಗಳ ಕುಟುಂಬ ಸದಸ್ಯರು, ನಿವೃತ್ತ ಪೊಲೀಸ್ ಅಧಿಕಾರಿ-ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಕಿತ್ತೂರು ಚೆನ್ನಮ್ಮ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಭಿಮಾನದ ಪ್ರತೀಕ, ಸೂರ್ಯ ಮುಳುಗದ ಸಾಮ್ರಾಜ್ಯ ಕಿತ್ತೂರ ಸಂಸ್ಥಾನದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ದಿಟ್ಟ ಮಹಿಳೆ ವೀರರಾಣಿ ಕಿತ್ತೂರು ಚೆನ್ನಮ್ಮ ಅವರ 201ನೇ ವಿಜಯೋತ್ಸವ ಹಾಗೂ 247ನೇ ಜಯಂತ್ಯುತ್ಸವದ ಅಂಗವಾಗಿ ವೀರರಾಣಿ ಚೆನ್ನಮ್ಮಾಜಿಯ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ವಿಜಯಕುಮಾರ್ ಗಡ್ಡಿ, ವಿಜಯೋತ್ಸವ ಸಮಿತಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ, ಶಾಂತಣ್ಣ ಮುಳವಾಡ, ಎಫ್.ವಿ. ಮರಿಗೌಡ್ರ, ಈರಣ್ಣ ಕರಿಬಿಷ್ಠಿ, ಮಹೇಶ ಕರಿಬಿಷ್ಠಿ, ಚನ್ನವೀರಪ್ಪ ಮಳಗಿ, ನಿಂಗನಗೌಡ ಹಿರೇಮನಿಪಾಟೀಲ, ಕಾಶಪ್ಪ ಗದಗಿನ, ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ಚಂದ್ರು ಪಾಟೀಲ, ಮಂಜು ಬಾಣದ, ಮಂಜುನಾಥ ಗುಡದೂರ, ಸಂಗಮೇಶ ಗೊಂದಿ, ಚೇತನ ಅಬ್ಬಿಗೇರಿ, ಕಿರಣ ಕಮತರ, ಸ್ವಾತಿ ಅಕ್ಕಿ, ಜಯಶ್ರೀ ಉಗಲಾಟದ, ಶೋಭಾ ಪಾಟೀಲ, ಸಂಕಣ್ಣವರ, ಕುಮಾರ ಹೊಂಬಳ, ಈರಮ್ಮ ತಾಳಿಕೋಟಿ, ಆನಂದ ಸುಳಿಕಲ್ಲ ಮುಂತಾದವರಿದ್ದರು.

# ತಾಲೂಕಾಡಳಿತದಿಂದ ಕಿತ್ತೂರು ಚೆನ್ನಮ್ಮ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕು ಆಡಳಿತಸೌಧದ ತಹಸೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ಕಂದಾಯ ಇಲಾಖೆ ಹಾಗೂ ತಾಲೂಕು ಆಡಳಿತ ಹುಬ್ಬಳ್ಳಿ ನಗರ ಮತ್ತು ಗ್ರಾಮೀಣ ವತಿಯಿಂದ ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಡಾ .ಸುವರ್ಣಲತಾ ಗದಿಗೆಪ್ಪ ಗೌಡ್ರು ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ಸಮಾಜದ ಮುಖಂಡರಾದ ಅನಸೂಯಾ ಅರಕೇರಿ, ಸರ್ವಮಂಗಳ, ಸಂಜೀವ ಧುಮ್ಮಕನಾಳ, ಚನ್ನಬಸಪ್ಪ ಧಾರವಾಡಶೆಟ್ರ, ರತ್ನಾ ಎಸ್. ಚಾಶೆಟ್ಟಿ, ಸದಾಶಿವ ಎಸ್. ಚಾಶೆಟ್ಟಿ, ವೀರಣ್ಣ ಬ.ನೀರಲಗಿ, ರತ್ನ, ಸುರೇಶ ಬಾರಕೇರ, ಸಮಾಜದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಶರಣರ ವಚನಗಳ ಸಾರವನ್ನು ಅರ್ಥೈಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶಿವಾನುಭವ ಗೋಷ್ಠಿಯಲ್ಲಿ ಚಿಂತನೆಗೊಳಪಡುವ ಶಿವಶರಣರ ತತ್ವದಾರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಂಸ್ಕಾರವಂತರಾಗಬೇಕು ಎಂದು ಡಾ. ಕೊಟ್ಟೂರೇಶ್ವರ ಸ್ವಾಮೀಜಿಗಳು ಸಲಹೆ ನೀಡಿದರು.

ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ ನಡೆದ 310ನೇ ಶಿವಾನುಭವ ಗೋಷ್ಠಿಯ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಸಾಮಾಜಿಕ ಮತ್ತು ಕೌಟುಂಬಿಕವಾಗಿ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಶಿವಾನುಭವದಲ್ಲಿಯ ಶಿವಶರಣರ ಜೀವನ ಚರಿತ್ರೆಯ ಸಂದೇಶಗಳು ಮಾರ್ಗದರ್ಶಕವಾಗುತ್ತವೆ. ಈ ದಿಸೆಯಲ್ಲಿ ವಿದ್ಯಾರ್ಥಿಗಳು ಶರಣರ ವಚನಗಳ ಸಾರವನ್ನು ಅರ್ಥೈಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಂಗೀತ ಕಲಾವಿದ ಹಾಗೂ ಹಿರಿಯರಾದ ಕೆ.ಬಿ. ವೀರಾಪೂರ ಮಾತನಾಡಿ, ಶಿವಾನುಭವ ಕಾರ್ಯಕ್ರಮಗಳು ನಮ್ಮ ದ್ವಂದ್ವಾತೀತ ಬದುಕಿನಿಂದ ನೆಮ್ಮದಿಯ ಜೀವನವನ್ನು ಕಂಡುಕೊಳ್ಳಲು ಸಹಾಕಾರಿಯಾಗುತ್ತವೆ ಎಂದರು. ನಿವೃತ್ತ ಶಿಕ್ಷಕ ರಾಮಣ್ಣ ಬೆಳಧಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಶ್ರೀಮಠದಲ್ಲಿ ಪ್ರತಿ ತಿಂಗಳು ಶಿವಾನುಭವ ಗೋಷ್ಠಿ ನಡೆಯುತ್ತಿದ್ದು, ಸಮಾಜದಲ್ಲಿಯ ಸಾಧನೆ ಮಾಡಿದ ಶೈಕ್ಷಣಿಕ, ಸಾಮಾಜಿಕ, ಕೃಷಿ, ಔದ್ಯೋಗಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು 310 ತಿಂಗಳಿಂದ ಗುರುತಿಸಿ ಗೌರವ ಸಮ್ಮಾನಿಸುತ್ತಾ ಬರಲಾಗುತ್ತಿದೆ. ಭಕ್ತರು ಸಹಾಯ, ಸಹಕಾರ ನೀಡಬೇಕೆಂದು ವಿನಂತಿಸಿಕೊಂಡರು.

ಪಿ.ಯು.ಸಿ ಮತ್ತು ಎಸ್.ಎಸ್.ಎಲ್.ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಾದ ಸುರೇಶ ಹಿರೇಹಾಳ, ಬಸವರಾಜ ಹರಕುಣಿ, ವರ್ಷಾ ಪಟ್ಟೇದ, ಕಿರಣ ಕರೇಗಲ್ಲ, ಯಲ್ಲಪ್ಪ ಚೂರಿ, ಸಂಚನಾ ಅಗಸನಕೊಪ್ಪ ಸನ್ಮಾನಿಸಲಾಯಿತು. ಸೋಮಣ್ಣ ಬಾಲಬಸವರ, ಶೇಖಪ್ಪ ಪೂಜಾರ, ಮಹಾದೇವಪ್ಪ ಯಾಳವಾಡ, ಶಿವಪುತ್ರಪ್ಪ ಯಾಳವಾಡ, ಈರಣ್ಣ ಯಾಳವಾಡ, ಸೋಮಣ್ಣ ಬಾಲಬಸವರ, ಶೇಖಪ್ಪ ಪೂಜಾರ ವೇದಿಕೆಯಲ್ಲಿದ್ದರು. ವೆಂಕಟೇಶ ಜುಂಜಣ್ಣಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ರಾಣಿ ಚೆನ್ನಮ್ಮರ ಆದರ್ಶ ಪಾಲಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಾಣ ಇರುವವರೆಗೂ ಬ್ರಿಟಿಷರ ವಿರುದ್ಧ ಹೋರಾಡಿದ ದಿಟ್ಟ ಮಹಿಳೆ ಕಿತ್ತೂರು ಚೆನ್ನಮ್ಮ. ಇವರ ಆದರ್ಶಗಳನ್ನು ಮಕ್ಕಳು ಪಾಲಿಸಬೇಕು ಎಂದು ಶಿಕ್ಷಕಿ ಎಸ್.ಎಂ. ಜಿಡ್ಡಿಮನಿ ಹೇಳಿದರು.

ಅವರು ಸಮಿಪದ ಕಣವಿ ಗ್ರಾಮದ ಕೆ.ಜಿ.ವಿ.ಎಸ್ ಪ್ರಾಥಮಿಕ ಶಾಲೆಯಲ್ಲಿ ಕಿತ್ತೂರು ಚೆನ್ನಮ್ಮ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕಿತ್ತೂರು ಚೆನ್ನಮ್ಮ ಸ್ವಾತಂತ್ರದ ಕಿಚ್ಚು ಹಚ್ಚುವ ಮೂಲಕ ಬ್ರಿಟಿಷರ ವಿರುದ್ಧ ಹೋರಾಡಿದ ಮೊದಲ ಮಹಿಳೆಯಾಗಿದ್ದು, ನೆಲ, ಜಲ, ಭಾಷೆಗಳ ಉಳಿವಿಗಾಗಿ ಶ್ರಮಿಸಿದವರು. ಇಂತಹ ಮಹನೀಯರ ಜೀವನ ಚರಿತ್ರೆ ನಮಗೆಲ್ಲರಿಗೂ ದಾರಿ ದೀಪವಾಗಿವೆ ಎಂದರು.

ಈ ಸಂದರ್ಭದಲ್ಲಿ ಎನ್.ಎಸ್. ಆಲೂರ, ಜಯಪ್ರಕಾಶ ಬಡಿಗೇರ, ಎಸ್.ವಾಯ್. ಕೊಪ್ಪದ, ಐ.ಎಸ್. ಹಿರೇಮಠ, ಟಿ.ಎನ್. ಲಿಂಗರಾಜ, ಎ.ಎನ್. ಸುಲಾಖೆ, ಎಂ.ಬಿ. ಬಂಡಿವಡ್ಡರ ಮುಂತಾದವರಿದ್ದರು.

### ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪದ್ಮಾವತಿ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ

# ದೇವದಾಸಿಯರ ಮಕ್ಕಳು ಆರ್ಥಿಕ ಸ್ವಾವಲಂಬಿಗಳಾಗಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪದ್ಮಾವತಿ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಸಂಜೆ ಧಾರವಾಡ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಜರುಗಿತು.

ಸಭೆಯಲ್ಲಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪದ್ಮಾವತಿ ಮಾತನಾಡಿ, ಉದ್ಯೋಗಿನಿ ಯೋಜನೆಯಡಿಯಲ್ಲಿ ದೇವದಾಸಿರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಯಾರೇ ಸಾಲ ಪಡೆಯಲು ಬ್ಯಾಂಕ್‌ಗಳಿಗೆ ಬಂದಲ್ಲಿ ಅವರಿಗೆ ಮೊದಲ ಆದ್ಯತೆಯನ್ನು ನೀಡಬೇಕು. ಅವರಿಗೆ ಅರ್ಜಿಗಳನ್ನು ಭರ್ತಿ ಮಾಡಲು ಅಧಿಕಾರಿಗಳು ಸಹಾಯ ಮಾಡಬೇಕು. ಅವರು ಬ್ಯಾಂಕಿಗೆ ಅಲೆದಾಡದಂತೆ ಅನುಕೂಲಗಳನ್ನು ಮಾಡಿಕೊಡಬೇಕೆಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ತಿಳಿಸಿದರು.

ಭಿಕ್ಷಾಟನೆ ಮಾಡುವವರು ಯಾರಾದರೂ ಕಂಡುಬಂದಲ್ಲಿ ಅಂತವರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಅಧಿಕಾರಿಗಳು ಗಮನ ಹರಿಸಬೇಕು. ಅವರಿಗೆ ಸ್ವಯಂ ಉದ್ಯೋಗ ಮಾಡುವಂತೆ ಉತ್ತೇಜಿಸಬೇಕು ಎಂದು ತಿಳಿಸಿದರು.

ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯಲ್ಲಿ ಧಾರವಾಡ ಜಿಲ್ಲೆಯು ನಿಧಾನಗತಿಯಲ್ಲಿ ಸಾಗುತ್ತಿದೆ. ಅಧಿಕಾರಿಗಳು, ಎನ್‌ಜಿಓ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಆದಷ್ಟು ಬೇಗನೆ ಸಮೀಕ್ಷೆಯನ್ನು ಪೂರ್ಣಗೊಳಿಸಬೇಕೆಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್. ಕುಕನೂರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಅಭಿವೃದ್ಧಿ ನಿರೀಕ್ಷಕಿ ನಂದಿನಿ ಕುಂಬಾರ ಸಭೆ ನಿರ್ವಹಿಸಿ, ವಂದಿಸಿದರು.

ಸಭೆಯಲ್ಲಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕಿ ಅಕ್ಕಮಹಾದೇವಿ, ಧಾರವಾಡ ಜಿಲ್ಲಾ ಅಗ್ರಣೀಯ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಬಸವರಾಜ ಗಡಾದ್, ಜಿಲ್ಲಾ ನಿರೂಪಣಾಧಿಕಾರಿ ಡಾ. ಕಮಲಾ ಬೈಲೂರ, ಮಹಿಳಾ ಅಭಿವೃದ್ಧಿ ಅಧಿಕಾರಿ ವಿಜಯಲಕ್ಷ್ಮೀ ಪಾಟೀಲ, ದೇವದಾಸಿ ಪುನರ್ವಸತಿ ಯೋಜನೆಯ ನೋಡಲ್ ಅಧಿಕಾರಿ ಮಧುಸೂದನ್ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು, ವಿವಿಧ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು, ಮಾಜಿ ದೇವದಾಸಿಯರ ಪ್ರತಿನಿಧಿಗಳು, ಲಿಂಗತ್ವ ಅಲ್ಪಸಂಖ್ಯಾತರ ಪ್ರತಿನಿಧಿಗಳು ಭಾಗವಹಿಸಿದ್ದರು.




ಮಾಜಿ ದೇವದಾಸಿಯರ ಮರು ಸಮೀಕ್ಷೆಯನ್ನು ಕೈಗೊಳ್ಳಬೇಕು. ದೇವದಾಸಿಯರ ಮಕ್ಕಳು ಸಹ ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ ಸ್ವಾವಲಂಬನೆಯನ್ನು ಹೊಂದಬೇಕು.

ಅದಕ್ಕಾಗಿ ಅಂತವರನ್ನು ಗುರುತಿಸಿ ಅವರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಬೇಕು ಎಂಬ ಉದ್ದೇಶದಿಂದ ಮಾಡಲಾಗುತ್ತಿದೆ ಎಂದು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪದ್ಮಾವತಿ ಹೇಳಿದರು.

# ಕಿತ್ತೂರ ಚೆನ್ನಮ್ಮ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಕ್ಷೇಮಾಭಿವೃದ್ಧಿ ಸಂಘ ಬೆಟಗೇರಿ-ಗದಗ ವತಿಯಿಂದ ಭಾರತದ ಬೆಳ್ಳಿಚುಕ್ಕಿ, ವೀರರಾಣಿ ಕಿತ್ತೂರ ಚೆನ್ನಮ್ಮರ 201ನೇ ವಿಜಯೋತ್ಸವ ಮತ್ತು 247 ಜಯಂತ್ಯುತ್ಸವ ಕಾರ್ಯಕ್ರಮ ಗುರುವಾಗ ಬೆಟಗೇರಿಯ ಉಸಗಿಕಟ್ಟಿ ಓಣಿಯಲ್ಲಿರುವ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಆವರಣದಲ್ಲಿ ಜರುಗಿತು.

ಈ ಸಂದರ್ಭದಲ್ಲಿ ಅಜ್ಜನಗೌಡ ಹಿರೇಮನಿಪಾಟೀಲ ಮಾತನಾಡಿ, ವೀರರಾಣಿ ಕಿತ್ತೂರ ಚೆನ್ನಮ್ಮ ಭಾರತದ ಇತಿಹಾಸದಲ್ಲಿಯೇ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಪ್ರಥಮ ಮಹಿಳೆ ಎಂಬ ಹೆಗ್ಗಳಿಕೆ ಹೊಂದಿದ್ದಾರೆ. ಅವರ ಧೈರ್ಯ, ಸಾಹಸ ಮತ್ತು ದೇಶಭಕ್ತಿ ನಮಗೆಲ್ಲ ಆದರ್ಶವಾಗಿದೆ ಎಂದು ನುಡಿದರು.

ಅಂದಪ್ಪ ಮುಳ್ಳಾಳ ಹಾಗೂ ಆನಂದ ಹೊಸಮನಿಯವರು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಈರಣ್ಣ ಮಾನೇದ, ಅಜ್ಜನಗೌಡ ಹಿರೇಮನಿಪಾಟೀಲ, ಬಸವರಾಜ ಕುಂದಗೋಳ, ನೀಲಪ್ಪ ಪಲ್ಲೇದ, ಪರಮೇಶ್ವರಗೌಡ ಮಲ್ಲನಗೌಡ್ರ, ಮುದಕಪ್ಪ ಪಲ್ಲೇದ, ಬಸಪ್ಪ ಪಿರಂಗಿ, ನಾಗಪ್ಪ ಉಪಸಣ್ಣವರ, ಬಸಪ್ಪ ಬಂಡಿ, ಮಹಾದೇವಪ್ಪ ಪಲ್ಲೇದ, ಚನ್ನಪ್ಪ ಗುಡದೂರ, ದೇವಿಧರ ಬನ್ನಿಕೊಪ್ಪ, ಶಂಕ್ರಪ್ಪ ಮಾಳಶೆಟ್ಟಿ, ಎನ್.ಎಲ್. ಮೆಣಸಗಿ, ಶಿವಾನಂದ ಮಾನೇದ, ಅಂದಪ್ಪ ಮುಳ್ಳಾಳ, ಬಸವರಾಜ ಪಲ್ಲೇದ, ರವಿರಾಜ ಮಾನೇದ, ಕಳಕಪ್ಪ ಮಾನೇದ, ಈರಣ್ಣ ಬೂದಿಹಾಳ, ಕಲ್ಯಾಣಪ್ಪ ಹೋಳಿ, ಮಂಜುನಾಥ ಮಾನೇದ, ಮಲ್ಲಪ್ಪ ಮ.ಪಲ್ಲೇದ, ಶಿವಣ್ಣ ನಾಗರಾಳ, ಅಶೋಕ ಕೊಂಡಿಕೊಪ್ಪ, ಆನಂದ ಹೊಸಮನಿ ಮುಂತಾದವರಿದ್ದರು.

### ಉಚಿತ ಹೃದಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿದ ಶಿವಕುಮಾರ್ ಸ್ವಾಮಿ ಅಭಿಮತ

# ತಪಾಸಣಾ ಶಿಬಿರಗಳು ಹೆಚ್ಚೆಚ್ಚು ನಡೆಯಲಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ನಮ್ಮ ಊರಿನಲ್ಲಿ ಹೆಚ್ಚು ಹೆಚ್ಚು ನಡೆಯಬೇಕಿದೆ ಎಂದು ಕಾಂಗ್ರೆಸ್ ಮುಖಂಡ ಶಿವಕುಮಾರ್ ಸ್ವಾಮಿ ಹೇಳಿದರು.

ತಾಲೂಕಿನ ಉಚ್ಚಂಗಿದುರ್ಗ ಗ್ರಾಮದ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಎಸ್.ಎಸ್. ನಾರಾಯಣ ಹೆಲ್ತ್ ಸೂಪರ್ ಸ್ಪೆಷಾಲಿಟಿ ಸೆಂಟರ್ ದಾವಣಗೆರೆ, ಸಮೃದ್ಧಿ ಸಂಸ್ಥೆ ಹಳೇಕಡ್ಲೇಬಾಳು, ನಾಗರಸನಹಳ್ಳಿ ವೀರೇಶ್, ಎನ್.ಪಿ. ದೇವರಬೆಳಕೆರೆ ಹಾಗೂ ಗ್ರಾ.ಪಂ ಇವುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಉಚಿತ ಹೃದಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಊರಿನ ಹಾಗೂ ಸುತ್ತಮುತ್ತಲಿನ ಹಳ್ಳಿಯ ಜನರು ಬಡವರಿದ್ದಾರೆ. ಹೆಚ್ಚಿನ ಚಿಕಿತ್ಸೆಗೆ ಎಸ್.ಎಸ್. ಆಸ್ಪತ್ರೆಗೆ ಬಂದಾಗ ಉಚಿತವಾಗಿ ತಪಾಸಣೆ ನೀಡಿ, ಶಿಬಿರಕ್ಕೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ನಮ್ಮ ಊರಿನ ವತಿಯಿಂದ ನೀಡುತ್ತೇವೆ ಎಂದು ಹೇಳಿದರು.

ಡಾ.ರಾಕೇಶ್ ಮಾತನಾಡಿ, ಹೃದಯವು ನಿರಂತರವಾಗಿ ಕೆಲಸ ಮಾಡುವ ಒಂದು ಪ್ರಮುಖ ಅಂಗ. ಅದರ ಕಾಳಜಿ ವಹಿಸುವುದು ಬಹಳ ಮುಖ್ಯ. ಇತ್ತೀಚಿನ ದಿನಗಳಲ್ಲಿ ಹೃದಯಘಾತಗಳು ಹೆಚ್ಚಾಗಿದ್ದು, ಮುಂಜಾಗೃತಾ ಕ್ರಮವಾಗಿ ತಪಾಸಣೆ ಮಾಡಿಸಬೇಕು. ಇತ್ತೀಚಿನ ದಿನಗಳಲ್ಲಿ ಯಾವ ಕಾಯಿಲೆಗಳು, ಯಾವ ಕಾರಣಕ್ಕೆ ಬರುತ್ತವೆ ಎಂಬುದು ಗೊತ್ತಾಗುವುದಿಲ್ಲ. ಈ ಶಿಬಿರದಲ್ಲಿ ಬಿ.ಪಿ, ಸಕ್ಕರೆ ಕಾಯಿಲೆ, ಇಸಿಜಿ ತಪಾಸಣೆಗೊಳಪಡಿಸಲಾಗುವುದು. ಈ ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಗ್ರಾ.ಪಂ ಉಪಾಧ್ಯಕ್ಷ ಮಡ್ರಳ್ಳಿ ಕೆಂಚಪ್ಪ, ಸದಸ್ಯರಾದ ಸಾಕಮ್ಮ ಸಿದ್ದಪ್ಪ, ಗಂಗಮ್ಮ ರಮೇಶ್, ಮಮತ ಸಿದ್ದೇಶ್, ಪೂಜಾರ್ ದಂಡ್ಯಪ್ಪ, ಪಿಡಿಒ ಶಿವಕುಮಾರ್ ನಾಯ್ಕ್, ಡಾ. ಶಕುಂತಲಾ, ಡಾ. ಹಂಸ, ಗೌರಿ ಅಶೋಕ್, ಸಮೃದ್ಧಿ ಸಂಸ್ಥೆ ಹಳೇ ಕಡ್ಲೆಬಾಳು, ಈರಣ್ಣ ನಾರಾಯಣ ಆಸ್ಪತ್ರೆ, ಆಶಾ ಕಾರ್ಯಕರ್ತೆಯರು, ಸಿಬ್ಬಂದಿ ವರ್ಗ ಹಾಗೂ ಗ್ರಾಮಸ್ಥರು ಹಾಜರಿದ್ದರು.



ಗ್ರಾ.ಪಂ ಉಪಾಧ್ಯಕ್ಷ ಮಡ್ರಳ್ಳಿ ಕೆಂಚಪ್ಪ ಮಾತನಾಡಿ, ಇತ್ತೀಚೆಗೆ 30-40 ವಯಸ್ಸಿನವರಿಗೂ ಹೃದಯಾಘಾತದ ಸಮಸ್ಯೆ ಕಾಡುತ್ತಿದೆ. ಈ ಸಮಸ್ಯೆಯ ಪರಿಹಾರಕ್ಕಾಗಿ ಇಂತಹ ಶಿಬಿರ ಆಯೋಜನೆಯಾಗಿದ್ದು ಸಂತೋಷದ ಸಂಗತಿ. ಯುವಕರು, ವೃದ್ಧರು, ಹೆಣ್ಣುಮಕ್ಕಳು ಸೇರಿದಂತೆ ವಿವಿಧ ವಯಸ್ಸಿನ ಜನರು ಇದರ ಸದುಪಯೋಗ ಪಡೆದುಕೊಂಡಿದ್ದಾರೆ ಎಂದರಲ್ಲದೆ, ಶಿಬಿರ ಆಯೋಜಿಸಿದ ಎಸ್.ಎಸ್. ನಾರಾಯಣ ಹೆಲ್ತ್ ಸೂಪರ್ ಸ್ಪೆಷಾಲಿಟಿ ಸೆಂಟರ್‌ಗೆ ಧನ್ಯವಾದ ಅರ್ಪಿಸಿದರು.

# ಸ್ವಾತಂತ್ರ್ಯದ ಬೆಳ್ಳಿ ಚುಕ್ಕಿ ಚೆನ್ನಮ್ಮ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬ್ರಿಟಿಷರ ವಿರುದ್ಧ ಹೋರಾಡಿದ ಪ್ರಥಮ ಮಹಿಳೆ ವೀರ ರಾಣಿ ಕಿತ್ತೂರ ಚೆನ್ನಮ್ಮ ರಾಷ್ಟ್ರ ಮಾತೆ, ಸ್ವಾತಂತ್ರ್ಯದ ಬೆಳ್ಳಿ ಚುಕ್ಕಿಯಾಗಿದ್ದಾರೆ ಎಂದು ರಾಮಣ್ಣಾ ಕಮಾಜಿ ಹೇಳಿದರು.

ಅವರು ಪಟ್ಟಣದ ವೀರ ರಾಣಿ ಕಿತ್ತೂರ ಚೆನ್ನಮ್ಮ ಸಹಕಾರಿ ಸಂಘದಲ್ಲಿ ಜಯಂತಿ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ವೀರ ರಾಣಿ ಕಿತ್ತೂರ ಚೆನ್ನಮ್ಮ ಸ್ವಾಭಿಮಾನದ ಸಂಕೇತವಾಗಿದ್ದು, ಅವರ ತತ್ವಾದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕು ಎಂದರು.

ಈ ಸಂದರ್ಭದಲ್ಲಿ ಪ.ಪಂ ಸದಸ್ಯ ವಿಜಯ ನೀಲಗುಂದ ಗದಗ ಜಿಲ್ಲಾ ಯೋಜನಾ ಸಮಿತಿ ಸದಸ್ಯ ಚುನಾವಣೆಯಲ್ಲಿ ಆಯ್ಕೆಯಾಗಿರುವ ನಿಮಿತ್ತ ಸನ್ಮಾನಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕೆ.ಎಲ್. ಕರಿಗೌಡರ, ಶರಣಪ್ಪ ಕಮಾಜಿ, ರವಿ ಬಳಿಗೇರ, ಯಲ್ಲಪ್ಪ ಕಮಾಜಿ, ಮುತ್ತು ಸುಂಕದ, ಮುತ್ತಪ್ಪ ಬಳ್ಳಾರಿ, ನಾಗಪ್ಪ ಬಾಳಿಕಾಯಿ, ರಾಜುಗೌಡ ಪಾಟೀಲ ಮಾಹಾಂತೇಶ ಬಳ್ಳಾರಿ ಇದ್ದರು.

# ಕಿತ್ತೂರ ಚೆನ್ನಮ್ಮ ಸ್ವಾಭಿಮಾನದ ಸಂಕೇತ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬ್ರಿಟಿಷರ ವಿರುದ್ಧ ಸಮರ ಸಾರಿದ ಕಿತ್ತೂರು ರಾಣಿ ಚೆನ್ನಮ್ಮ ಈ ನಾಡಿನ ಸ್ವಾಭಿಮಾನದ ಸಂಕೇತ ಎಂದು ಪ.ಪಂ ಸದಸ್ಯ ಕೆ.ಎಲ್. ಕರಿಗೌಡರ ಹೇಳಿದರು.

ಅವರು ಪಟ್ಟಣ ಪಂಚಾಯತಿ ಸಭಾಭವನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ದೇಶದಿಂದ ಬ್ರಿಟಿಷರನ್ನು ಓಡಿಸಬೇಕು ಎಂದು ಪಣತೊಟ್ಟು ಹೋರಾಡಿದ ಚೆನ್ನಮ್ಮಳ ಕೆಚ್ಚದೆಯ ಹೋರಾಟವನ್ನು ಯುವ ಜನರು ಅರಿತುಕೊಳ್ಳಬೇಕು ಎಂದರು.

ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಸದಸ್ಯರಾದ ವಿಜಯ ನೀಲಗುಂದ, ನಾಗರಾಜ ದೇಶಪಾಂಡೆ, ಬಸವರಾಜ ಹಾರೋಗೇರಿ, ಬಿ.ವಿ. ಸುಂಕಾಪೂರ, ಎ.ಡಿ. ಮುಜಾವಾರ, ರಾಮಣ್ಣಾ ಕಮಾಜಿ, ಅನೂಪ ಕೆಂಚನಗೌಡರ, ಶರಣಪ್ಪ ಕಮಾಜಿ, ರವಿ ಬಳಿಗೇರ, ಮಾಹಾಂತೇಶ ಕಣವಿ ಇದ್ದರು.



# ಚೆನ್ನಮ್ಮ ನಮ್ಮೆಲ್ಲರ ಸ್ವಾಭಿಮಾನದ ಪ್ರತೀಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ನಾಡಿನ ವೀರವನಿತೆಯಾಗಿ ತನ್ನ ಅಪ್ರತಿಮ ಸಾಹಸ ಮತ್ತು ಶೌರ್ಯಗಳಿಂದ ದೇಶದ ಸ್ವಾತಂತ್ರಕ್ಕಾಗಿ ಮೆರೆದ ಕಿತ್ತೂರು ರಾಣಿ ಚೆನ್ನಮ್ಮರ ಧೈರ್ಯ ಇಂದಿಗೂ ಪ್ರಸ್ತುತವಾಗಿದ್ದು, ರಾಣಿ ಚನ್ನಮ್ಮ ನಮ್ಮೆಲ್ಲರ ಸ್ವಾಭಿಮಾನದ ಪ್ರತೀಕವಾಗಿದ್ದಾಳೆ ಎಂದು ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಅಭಿಪ್ರಾಯಪಟ್ಟರು.

ಅವರು ಗುರುವಾರ ಪಟ್ಟಣದ ಹಳೆ ಬಸ್ ನಿಲ್ದಾಣದ ಹತ್ತಿರವಿರುವ ವೀರರಾಣಿ ಕಿತ್ತೂರು ಚೆನ್ನಮ್ಮ ಮೂರ್ತಿಯ ಬಳಿ ವೀರಶೈವ ಪಂಚಮಸಾಲಿ ಸಂಘ ಮತ್ತು ವಿವಿಧ ಸಂಘಟನೆಗಳಿಂದ ಚೆನ್ನಮ್ಮರ 201ನೇ ವಿಜಯೋತ್ಸವ ಹಾಗೂ 247ನೇ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸ್ವಾತಂತ್ರ ಸಂಗ್ರಾಮಕ್ಕೆ ಕಿಚ್ಚು ಹಚ್ಚಿದ ಕೀರ್ತಿ ವೀರರಾಣಿ ಕಿತ್ತೂರು ಚೆನ್ನಮ್ಮಳಿಗೆ ಸಲ್ಲುತ್ತದೆ. ಬ್ರಿಟಿಷರ ವಿರುದ್ಧ ಹೋರಾಡಿ ಸ್ವಾತಂತ್ರಕ್ಕಾಗಿ ವೀರಮರಣವನ್ನಪ್ಪಿದಳು. ಅವರ ಧೈರ್ಯ, ಸಾಹಸ, ಇಂದಿಗೂ ಆದರ್ಶವಾಗಿದ್ದು, ಅವರ ನಡೆ-ನುಡಿ, ದೇಶಪ್ರೇಮ ಎಲ್ಲರಲ್ಲಿಯೂ ಬರಬೇಕು ಎಂದು ಹೇಳಿದರು.

ನಾಗರಾಜ ಚಿಂಚಲಿ, ಬಸವರಾಜ ಅರಳಿ, ನೀಲಪ್ಪ ಕರ್ಜೆಕಣ್ಣವರ, ಪ್ರವೀಣ ಬಾಳಿಕಾಯಿ ಮಾತನಾಡಿ, ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮ ಸ್ತ್ರೀ ಶಕ್ತಿ ಮತ್ತು ಸ್ವಾಭಿಮಾನದ ಸಂಕೇತವಾಗಿದ್ದು, ಸ್ವಾತಂತ್ರದ ಕಹಳೆಯೂದಿ ಬ್ರಿಟಿಷರ ಸೊಕ್ಕಡಗಿಸಿದ ಪ್ರಥಮ ಸ್ವಾತಂತ್ರ ಹೋರಾಟಗಾರ್ತಿಯಾಗಿದ್ದಾಳೆ. ಚೆನ್ನಮ್ಮಾಜಿ ಯಾವುದೇ ಒಂದು ಸಮಾಜಕ್ಕೆ ಸೀಮಿತವಾದವರಲ್ಲ, ಇಡಿ ದೇಶವೇ ಅವರ ಶೌರ್ಯ-ಪರಾಕ್ರಮಕ್ಕೆ ತಲೆಬಾಗಿದೆ. ಅಂತಹ ವೀರ ಮಹಿಳೆಯ ವಿಜಯೋತ್ಸವ ಆಚರಿಸುವ ನಿಟ್ಟಿನಲ್ಲಿ ಎಲ್ಲರೂ ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಗುರುಪ್ಪ ಮುಳಗುಂದ, ಶಿವನಗೌಡ್ರ ಅಡರಕಟ್ಟಿ, ಶಿವಜೋಗೆಪ್ಪ ಚಂದರಗಿ, ಮಲ್ಲಿಕಾರ್ಜುನ ನೀರಾಲೋಟಿ, ಮಹಾದೇವಪ್ಪ ಅಣ್ಣಿಗೇರಿ, ಬಸವರಾಜ ಗೋಡಿ, ರಾಜು ಲಿಂಬಿಕಾಯಿ, ಮುರುಘೇಂದ್ರಸ್ವಾಮಿ ಹಿರೇಮಠ, ಜಗದೀಶ ಪುರಾಣಿಕಮಠ ಮುಂತಾದವರಿದ್ದರು.

# ಬಿಹಾರ ಚುನಾವಣೆ| ಮಹಾಘಟಬಂಧನದ ಮುಖ್ಯಮಂತ್ರಿಯಾಗಿ ತೇಜಸ್ವಿ ಯಾದವ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಮಿತ್ರ ಪಕ್ಷಗಳ ನಡುವೆ ವಾರಗಳ ಕಾಲ ನಡೆದ ವಾಗ್ವಾದ ಮತ್ತು ತೀವ್ರ ಚರ್ಚೆಗಳ ನಂತರ, ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರನ್ನು ಮಹಾಘಟಬಂಧನದ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಇಂದಿನ ಪತ್ರಿಕಾಗೋಷ್ಠಿಯಲ್ಲಿ ಘೋಷಿಸಲಾಯಿತು.

ಈ ಮೂಲಕ ವಿರೋಧ ಪಕ್ಷಗಳು ಬಲಪ್ರದರ್ಶನವಾಗಿ ಈ ಸಂದರ್ಭ ಮಾರ್ಪಟ್ಟಿತು. ಸೀಟು ಹಂಚಿಕೆ ಮಾತುಕತೆಯ ಸಮಯದಲ್ಲಿ ಕಠಿಣ ಚೌಕಾಸಿ ನಡೆಸಿದ ವಿಕಾಸಶೀಲ್ ಇನ್ಸಾನ್ ಪಕ್ಷದ (ವಿಐಪಿ) ಮುಖ್ಯಸ್ಥ ಮುಖೇಶ್ ಸಹಾನಿ ಅವರನ್ನು ಉಪಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸಲಾಯಿತು. "ಎಲ್ಲ ಹಿರಿಯ ನಾಯಕರೊಂದಿಗೆ ಚರ್ಚಿಸಿದ ನಂತರ, ಮುಂಬರುವ ಬಿಹಾರ ಚುನಾವಣೆಯಲ್ಲಿ ತೇಜಸ್ವಿ ಯಾದವ್ ಅವರು ಮ'ಂಹಾ ಘ್ ಟ ಬ ಂ ಧ' ನ್ ದ ಮ' ುು ಖ್ಯ ಮ' ಂ ತ್ರಿ ಅಭ್ಯರ್ಥಿಯಾಗುತ್ತಾರೆ ಎಂದು ನಾವು ನಿರ್ಧರಿಸಿದ್ದೇವೆ. ಅವರಿಗೆ ಮುಂದೆ ದೀರ್ಘ ಭವಿಷ್ಯವಿದೆ" ಎಂದು ಮಹಾಘಟಬಂಧನದಲ್ಲಿನ ಬಿರುಕುಗಳ ನಡುವೆ ಸಮಸ್ಯೆ ನಿವಾರಕರಾಗಿ ಪಾಟ್ನಾಕ್ಕೆ ಧಾವಿಸಿದ ಹಿರಿಯ ಕಾಂಗ್ರೆಸ್ ನಾಯಕ ಅಶೋಕ್ ಗೆಹ್ಲೋಟ್ ಹೇಳಿದರು.

ನಿಶಾದ್ ಸಮುದಾಯದಲ್ಲಿ ಪ್ರಭಾವ ಹೊಂದಿರುವ ಸಹಾನಿಯನ್ನು ಹೊರತುಪಡಿಸಿ, ಬಿಹಾರದಲ್ಲಿ ಇಂಡಿಯಾ ಬಣ ಅಧಿಕಾರಕ್ಕೆ ಬಂದರೆ ಮತ್ತೊಬ್ಬ ಹಿಂದುಳಿದ ವರ್ಗದ ನಾಯಕನನ್ನು ಉಪಮುಖ್ಯಮಂತ್ರಿಯನ್ನಾಗಿ ಮಾಡಲಾಗುವುದು ಎಂದು ಗೆಹ್ಲೋಟ್ ಹೇಳಿದರು.



# ನಿಧನ

## ಶಂಕ್ರಪ್ಪ ದ್ಯಾಮಣ್ಣನವರ



**ರಾಣೆಬೆನ್ನೂರು:** ತಾಲೂಕಿನ ಹೊಳೆಆನವೇರಿ ಗ್ರಾಮದ ಶಂಕ್ರಪ್ಪ ಹೊಳಿಯಪ್ಪ ದ್ಯಾಮಣ್ಣನವರ (81) ಮಂಗಳವಾರ ನಿಧನ ಹೊಂದಿದರು. ಮೃತರು ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಬುಧವಾರ ಹೊಳೆಆನವೇರಿಯಲ್ಲಿ ಜರುಗಿತು. ಮಾಜಿ ಶಾಸಕ ಅರುಣ ಪೂಜಾರ ಸೇರಿದಂತೆ ಹಲವಾರು ಗಣ್ಯರು ಆಗಮಿಸಿ ಮೃತರ ಅಂತಿಮ ದರ್ಶನ ಪಡೆದರು.

# ಹೊಸ ಐಟಿ ನಿಯಮಗಳು ಜಾರಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ಸರ್ಕಾರವು 2021ರ ಮಾಹಿತಿ ತಂತ್ರಜ್ಞಾನ ನಿಯಮಗಳನ್ನು ಬುಧವಾರ ಬದಲಾಯಿಸಿದೆ. ಈ ಬ ದ' ಲಾ ವ' ಣ' ಯಿ ಂ ದ', ಇಂಟರ್‌ನೆಟ್‌ನಲ್ಲಿ ಹಾಕಲಾದ ವಿಷಯ (ಕಂಟೆಂಟ್) ಅನ್ನು ತೆಗೆದುಹಾಕಲು ಯಾವ ಸರ್ಕಾರಿ ಸಂಸ್ಥೆಗಳು ಅಥವಾ ಅಧಿಕಾರಿಗಳು ಆದೇಶಿಸಬಹುದು ಎಂಬುದನ್ನು ಸ್ಪಷ್ಟವಾಗಿ ತಿಳಿಸಿದೆ.

ಈ ಹಿಂದಿನ ನಿಯಮದಲ್ಲಿ ಸರ್ಕಾರ ಅಥವಾ ಅದರ ಸಂಸ್ಥೆ ಸಾಮಾಜಿಕ ಮಾಧ್ಯಮ ವೇದಿಕೆಗಳಿಂದ ವಿಷಯವನ್ನು ತೆಗೆದುಹಾಕಲು ನಿರ್ದೇಶಿಸಬಹುದು ಎಂದು ಹೇಳಲಾಗಿತ್ತು.

ತಿದ್ದುಪಡಿ ನಿಯಮ ಅಥವಾ ಹೊಸ ನಿಯಮದಲ್ಲಿ, ಸಾಮಾಜಿಕ ಮಾಧ್ಯಮ ವೇದಿಕೆಗಳ ವಿಷಯಗಳನ್ನು ತೆಗೆದುಹಾಕಲು ಅಥವಾ ಅದರ ಬಳಕೆಗೆ ನಿರ್ಬಂಧ ವಿಧಿಸಲು ಸಮರ್ಥ ನ್ಯಾಯವ್ಯಾಪ್ತಿಯ ನ್ಯಾಯಾಲಯದ ಆದೇಶದ ಮೂಲಕ ಅಥವಾ ಜಂಟಿ ಕಾರ್ಯದರ್ಶಿ ಅಥವಾ ನಿರ್ದೇಶಕರ ಹುದ್ದೆಗಿಂತ ಕಡಿಮೆಯಿಲ್ಲದ ಸರ್ಕಾರಿ ಅಧಿಕಾರಿಯ ಸೂಚನೆಯ ಮೂಲಕ ನಿರ್ದೇಶಿಸಬಹುದು ಎಂದು ಹೇಳಲಾಗಿದೆ. ಪೊಲೀಸರಿಂದ ಟೇಕ್-ಡೌನ್ ನೋಟಿಸ್ (ತೆಗೆದು ಹಾಕುವ ಪತ್ರ) ಬಂದರೆ, ಅದನ್ನು ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಹುದ್ದೆಗಿಂತ ಕಡಿಮೆಯಿಲ್ಲದ ಅಧಿಕಾರಿ ಹೊರಡಿಸಿರಬೇಕು. ಅಲ್ಲದೆ, ಅಂತಹ ಸೂಚನೆಗಳು 'ಲಿಖಿತ ರೂಪದಲ್ಲಿ ತಾರ್ಕಿಕ ಮಾಹಿತಿ' ಆಗಿರಬೇಕು ಎಂದು ಕೇಂದ್ರ ಸರ್ಕಾರ ಆದೇಶಿಸಿದೆ.

### ಕಿತ್ತೂರ ಚೆನ್ನಮ್ಮಳ ಜಯಂತಿ ಆಚರಣೆಯನ್ನು ನಿರ್ಲಕ್ಷಿಸಿದರೇ ತಾಲೂಕಾ ದಂಡಾಧಿಕಾರಿ?

# ತಹಸೀಲ್ದಾರರ ಅಮಾನತ್ತಿಗೆ ಪಟ್ಟು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಾ ದಂಡಾಧಿಕಾರಿ ಧನಂಜಯ ಎಂ ಅವರು ಸ್ವಾತಂತ್ರ್ಯ ಹೋರಾಟಗಾರ್ತಿ ವೀರರಾಣಿ ಕಿತ್ತೂರ ಚೆನ್ನಮ್ಮಳ ಜಯಂತಿ ಮತ್ತು ವಿಜಯೋತ್ಸವ ಆಚರಣೆಯನ್ನು ನಿರ್ಲಕ್ಷಿಸಿ ಅಪಮಾನ ಮಾಡಿದ್ದು, ಇವರನ್ನು ಕೂಡಲೇ ಅಮಾನತ್ತು ಮಾಡಬೇಕು ಎಂದು ಗುರುವಾರ ಲಕ್ಷ್ಮೇಶ್ವರ ತಹಸೀಲ್ದಾರ ಕಚೇರಿಯ ಎದುರು ಪಂಚಮಸಾಲಿ ಸಮಾಜ ಬಾಂಧವರು ವಿವಿಧ ಸಂಘಟನೆ ಮತ್ತು ಸಮಾಜದವರೊಡಗೂಡಿ ಪ್ರತಿಭಟನೆ ನಡೆಸಿದರು.

ತಹಸೀಲ್ದಾರ ಕಚೇರಿಯಲ್ಲಿ ಚೆನ್ನಮ್ಮರ ಜಯಂತಿ ಆಚರಣೆ ಮಾಡಿಲ್ಲ ಎಂಬ ಸುದ್ದಿ ಹರಡಿದ ನಂತರ ಕಾಟಾಚಾರಕ್ಕೆ ಆಚರಣೆ ಮಾಡಿದ್ದಾರೆ. ಅಲ್ಲದೇ ತಹಸೀಲ್ದಾರ ಧನಂಜಯ ಎಂ ಸ್ಥಳೀಯವಾಗಿಯೇ ಇದ್ದರೂ ಚೆನ್ನಮ್ಮನ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿಲ್ಲ ಮತ್ತು ಈ ಬಗ್ಗೆ ಪೂರ್ವಭಾವಿ ಸಭೆಯನ್ನೂ ಮಾಡಿಲ್ಲ ಎಂದು ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ನೇತೃತ್ವದಲ್ಲಿ ತಹಸೀಲ್ದಾರ ಕಚೇರಿಗೆ ದೌಡಾಯಿಸಿದ ಸಮಾಜ ಬಾಂಧವರು ಕಚೇರಿಯ ಮುಂದೆ ಪೆಂಡಾಲ್ ಹಾಕಿ ಚೆನ್ನಮ್ಮಾಜಿ ಮತ್ತು ಮಹಾತ್ಮ ಗಾಂಧೀಜಿ ಫೋಟೋ ಇರಿಸಿ ಪ್ರತಿಭಟನೆಗಿಳಿದರು.

ಪ್ರಾರಂಭದಲ್ಲಿ ಸಣ್ಣ ಪ್ರಮಾಣದಲ್ಲಿದ್ದ ವಿರೋಧ, ಕರ್ನಾಟಕ ರಕ್ಷಣಾ ವೇದಿಕೆ, ಕರವೇ ಸ್ವಾಭಿಮಾನಿ ಸೇನೆ, ಶ್ರೀರಾಮ ಸೇನೆ, ಸಂಗೊಳ್ಳಿ ರಾಯಣ್ಣ ವೇದಿಕೆ ಸೇರಿದಂತೆ ವಿವಿಧ ಸಮಾಜ ಮತ್ತು ಸಂಘಟನೆಯವರು, ಮಹಿಳೆಯರೂ ಸಹ ಪಾಲ್ಗೊಂಡಿದ್ದರಿಂದ ಕೆಲ ಹೊತ್ತಿಗೆ ತೀವ್ರ ಸ್ವರೂಪ ಪಡೆದುಕೊಂಡಿತು.

ತಾಲೂಕಾ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, ತಹಸೀಲ್ದಾರ ಕಚೇರಿಯಲ್ಲಿ ತಡವಾದರೂ ಜಯಂತಿ ಆಚರಣೆ ಮಾಡಿಲ್ಲ ಎಂಬ ಮಾಹಿತಿಯಿಂದ ತಜಿವಿಜಿಗೊಂಡು ಫೋಟೋ ಇಟ್ಟು ಪೂಜೆ ಮಾಡಿದ್ದಾರೆ. ತಹಸೀಲ್ದಾರರು ಸ್ಥಳೀಯವಾಗಿಯೇ ಇದ್ದರೂ ಸಹ ಜಯಂತಿ ಆಚರಣೆಯಲ್ಲಿ ಪಾಲ್ಗೊಂಡಿಲ್ಲ. ಜಯಂತಿ ಆಚರಣೆಯ ಕುರಿತು ಯಾವುದೇ ಸಭೆಯನ್ನೂ ಮಾಡಿಲ್ಲ ಮತ್ತು ಯಾರೊಬ್ಬರನ್ನೂ ಆಹ್ವಾನಿಸಿಲ್ಲ. ಇದು ಅವರ ಬೇಜಾವಾಬ್ದಾರಿತನ ಹಾಗೂ ಸರ್ಕಾರದ ಆದೇಶ ಧಿಕ್ಕರಿಸಿದ್ದಕ್ಕೆ ಸಾಕ್ಷಿಯಾಗಿದೆ. ಅಲ್ಲದೇ ಇದು ಸ್ವತಂತ್ರ ಭಾರತದ ಬೆಳ್ಳಿಚುಕ್ಕಿ ಕಿತ್ತೂರ ರಾಣಿ ಚೆನ್ನಮ್ಮಾಜಿಗೆ ಮಾಡಿದ ಅಪಮಾನವಾಗಿದೆ. ಕೂಡಲೇ ಇವರನ್ನು ಅಮಾನತ್ತು ಮಾಡಬೇಕು ಎಂದು ಆಗ್ರಹಿಸಿದರು.

ಇದನ್ನೇ ಪ್ರತಿಪಾದಿಸಿ ಮಾತನಾಡಿದ ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ, ಕರವೇ (ನಾರಾಯಣಗೌಡ ಬಣ) ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ, ಶ್ರೀರಾಮಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಸಂಗೊಳ್ಳಿ ರಾಯಣ್ಣ ವೇದಿಕೆಯ ಮಂಜು ಮುಳಗುಂದ, ಪ್ರಕಾಶ ಮಾದನೂರ, ಲೋಕೇಶ ಸುತಾರ, ಹೊನ್ನಪ್ಪ ವಡ್ಡರ, ನಾಗರಾಜ ಚಿಂಚಲಿ, ನೀಲಪ್ಪ ಶರಸೂರಿ ಅನೇಕರು ತಹಸೀಲ್ದಾರ ಅಮಾನತ್ತು ಆಗಲೇಬೇಕು ಎಂದು ಪಟ್ಟು ಹಿಡಿದರು. ಬಟ್ಟೂರ ಗ್ರಾ.ಪಂನಲ್ಲಿಯೂ ಜಯಂತಿ ಆಚರಣೆ ನಿರ್ಲಕ್ಷಿಸಿದ್ದಾರೆ ಎಂದು ಗ್ರಾ.ಪಂ ಸದಸ್ಯ ಮಂಜುನಾಥ ಗೌರಿ ಆರೋಪಿಸಿದರು.

ವಿಷಯ ತಿಳಿದು ಪ್ರತಿಭಟನಾ ಸ್ಥಳಕ್ಕಾಗಮಿಸಿದ ಅಪರ ಜಿಲ್ಲಾಧಿಕಾರಿ ದುರಗೇಶ ಆರ್.ಕೆ ಅವರು, ಆದ ತಪ್ಪಿಗೆ ತಹಸೀಲ್ದಾರರಿಗೆ ನೊಟೀಸ್ ನೀಡಲಾಗುವುದು ಎಂದು ಪ್ರತಿಭಟನಾ ನಿರತರನ್ನು ಸಮಾಧಾನಪಡಿಸಲೆತ್ನಿಸಿದರೂ ಪಟ್ಟು ಸಡಿಲಿಸದ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳಿಗೂ ಅಮಾನತ್ತಿನ ಅಧಿಕಾರ ಇಲ್ಲದಿದ್ದರೆ ಕಂದಾಯ ಇಲಾಖೆಯ ಅಧೀನ ಕಾರ್ಯದರ್ಶಿಗಳಿಂದ ಅಮಾನತ್ತಿನ ಆದೇಶ ಮಾಡಿಸುವಂತೆ ಆಗ್ರಹಿಸಿದರು. ಅನಿವಾರ್ಯವಾಗಿ ಅಪರ ಜಿಲ್ಲಾಧಿಕಾರಿಗಳು ವಾಪಸ್ ತೆರಳಿದರು. ಪ್ರತಿಭಟನಾ ಸ್ಥಳದಲ್ಲಿಯೇ ಅಡುಗೆ ಮಾಡಿ, ಅಲ್ಲಿಯೇ ಊಟ ಮಾಡಿ, ಮಳೆಯ ನಡುವೆಯೂ ಪ್ರತಿಭಟನೆ ಮುಂದುವರೆಸಿದರು.

ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಎಫ್.ವಿ. ಮರಿಗೌಡರ, ಜಿಲ್ಲಾಧ್ಯಕ್ಷ ಈರಣ್ಣ ಕರಿಬಿಷ್ಠಿ, ಶಿರಹಟ್ಟಿ ತಾಲೂಕಾಧ್ಯಕ್ಷ ಬಸವರಾಜ ತುಳಿ, ರಾಜ್ಯ ಸಂಚಾಲಕ ಸೋಮಣ್ಣ ಡಾಣಗಲ್, ಶರಣಪ್ಪ ಹೊಂಬಳ, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಹೊನ್ನಪ್ಪ ವಡ್ಡರ, ಚನ್ನ ಮಾತನಾಡಿ, ಸರ್ಕಾರದ ಆದೇಶವನ್ನೂ ಪಾಲಿಸದ ಮತ್ತು ಸ್ವಾತಂತ್ರ ಹೋರಾಟಗಾರರಿಗೆ ಗೌರವ ಕೊಡದ ಅಧಿಕಾರಿ ನಮಗೆ ಬೇಡ ಎಂದರು.

ಈ ವೇಳೆ ಶಿವನಗೌಡ ಅಡರಕಟ್ಟಿ, ಗುರಪ್ಪ ಮುಳಗುಂದ, ಶಿವಜೋಗೆಪ್ಪ ಚಂದರಗಿ, ನೀಲಪ್ಪ ಕರ್ಜೆಕಣ್ಣವರ, ಶಂಕರ ಬ್ಯಾಡಗಿ, ಮಾದೇವಪ್ಪ ಅಣ್ಣಿಗೇರಿ, ಮಲ್ಲಿಕಾರ್ಜುನ ನೀರಾಲೋಟಿ, ನಿಂಗಪ್ಪ ಪ್ಯಾಟಿ, ಮುದ್ದಣ್ಣ ಸಾಲಮನಿ, ಚನ್ನಪ್ಪ ಕರಿಯತ್ತಿನ, ರಾಜು ಲಿಂಬಿಕಾಯಿ, ಶಿವು ಕಟಗಿ, ಚಂದ್ರು ಮಾಗಡಿ ಸೇರಿ ಅನೇಕರಿದ್ದರು.

### ಹಾವಳಿ ಆಂಜನೇಯ ದೇವಸ್ಥಾನದ ರಥೋತ್ಸವ

# ಎಲ್ಲರ ಜೀವನದಲ್ಲಿ ಬೆಳಕು ಪ್ರಜ್ವಲಿಸಲಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೀಪಾವಳಿ ಪಾಡ್ಯದ ದಿನವಾದ ಬುಧವಾರ ಸಂಜೆ ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ರಥೋತ್ಸವವನ್ನು ಸಂಪ್ರದಾಯದಂತೆ ಸಡಗರ, ಸಂಭ್ರಮ ಮತ್ತು ಶ್ರದ್ಧಾ-ಭಕ್ತಿಯಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿಸಲಾಯಿತು.

ರಥೋತ್ಸವ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ವಿದ್ಯುತ್ ಅಲಂಕಾರ, ಹನಮಂತ ದೇವರ ಮೂರ್ತಿಯನ್ನು ಬೆಣ್ಣೆ ಮತ್ತು ವೀಳ್ಯದೆಲೆಯಿಂದ ಅಲಂಕರಿಸಲಾಗಿತ್ತು. ಸಂಜೆ ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು. ಇತ್ತೀಚಿನ ವರ್ಷಗಳಲ್ಲಿ ಈ ಜಾತ್ರೆಗೆ ಭಕ್ತರ ಸಂಖ್ಯೆ ಹೆಚ್ಚುತ್ತಿದ್ದು, ವರ್ಷದಿಂದ ವರ್ಷಕ್ಕೆ ಜಾತ್ರೆಯ ರಂಗು ಮುಗಿಲೇರುತ್ತಿದೆ.

ರಥೋತ್ಸವಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿದ ಹೂವಿನಶಿಗ್ಲಿ ಶ್ರೀಗಳು, ಅಜ್ಞಾನ, ಅಂಧಕಾರ ಕಳೆದು ಜ್ಞಾನದ ಜ್ಯೋತಿ ಬೆಳಗಿಸುವುದು ದೀಪಾವಳಿ ಹಬ್ಬದ ವೈಶಿಷ್ಟ್ಯವಾಗಿದೆ. ದೀಪವು ಧರ್ಮ, ಸಂಸ್ಕೃತಿ, ಜ್ಞಾನ ಮತ್ತು ಆಧ್ಯಾತ್ಮದ ಸಂಕೇತವಾಗಿ, ದೀಪ ಬೆಳಗಿದಂತೆ ಎಲ್ಲರ ಜೀವನದಲ್ಲಿ ಬೆಳಕು ಪ್ರಜ್ವಲಿಸಬೇಕು. ಸಮಾಜದಲ್ಲಿ ಮತ್ತೊಬ್ಬರ ಬಾಳಿಗೆ ಬೆಳಕಾಗುವ ಕೆಲಸ ಮಾಡಬೇಕೇ ಹೊರತು ಕತ್ತಲೆಗೆ ತಳ್ಳುವ ಕಾರ್ಯವನ್ನು ಮಾಡಬಾರದು. ಜಾತ್ರೆ, ಹಬ್ಬ-ಹರಿದಿನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಪ್ರತಿಯೊಂದು ಹಬ್ಬಕ್ಕೂ ಧಾರ್ಮಿಕ ಹಿನ್ನೆಲೆ ಇದೆ. ಈ ನಿಟ್ಟಿನಲ್ಲಿ ಇಲ್ಲಿನ ಹಾವಳಿ ಹನುಮಂತ ದೇವರು ವಿಶೇಷ ಶಕ್ತಿ ಹೊಂದಿದ ಜಾಗೃತ ದೇವರಾಗಿದ್ದು, ಇಲ್ಲಿನ ಭಕ್ತರು ಹಮ್ಮಿಕೊಳ್ಳುತ್ತಿರುವ ಕಾರ್ಯಗಳು ಶ್ಲಾಘನೀಯ ಎಂದು ನುಡಿದರು. ಶಾಸಕ ಡಾ. ಚಂದ್ರು ಲಮಾಣಿ, ಈಶ್ವರಪ್ಪ ಕುಂಬಾರ, ನೀಲಪ್ಪ ಕರ್ಜೆಕಣ್ಣವರ, ನಾಗರಾಜ ಚಿಂಚಲಿ, ನಿಂಗಪ್ಪ ಬನ್ನಿ, ಮಹೇಶ ಹೊಗೆಸೊಪ್ಪಿನ, ಸುನೀಲ ಮಹಾಂತಶೆಟ್ಟರ, ವಿಜಯಕುಮಾರ ಹತ್ತಿಕಾಳ, ಫಕ್ಕೀರೇಶ ಅಣ್ಣಿಗೇರಿ, ಸುನೀಲ ಮುಳಗುಂದ, ಮಲ್ಲಿಕಾರ್ಜುನ ಮುಳಗುಂದ, ಶೇಖಪ್ಪ ಕರ್ಜೆಕಣ್ಣವರ, ಮಾಂತೇಶ ಗೋಡಿ, ನವೀನ ಕುಂಬಾರ, ಮಲ್ಲಪ್ಪ ಚಕ್ರಸಾಲಿ, ಬಸವರಾಜ ಚಕ್ರಸಾಲಿ, ಮಂಜುನಾಥ ಕೊಡಳ್ಳಿ, ಜಗದೀಶ ಕುಂಬಾರ, ಈರಣ್ಣ ಪೂಜಾರ, ಅರ್ಚಕ ಮುರಘೇಂದ್ರಸ್ವಾಮಿ ಹಿರೇಮಠ, ಭರಮಪ್ಪ ಅಣ್ಣಿಗೇರಿ ಹಾಗೂ ಹಿಂದೂ ಮಹಾಸಭಾ ಗಣಪತಿ ಸೇವಾ ಮಂಡಳಿ, ಹಾವಳಿ ಆಂಜನೇಯ ಭಜನಾ ಮಂಡಳಿ, ಯುವಕ ಮಂಡಳಿ ಸದಸ್ಯರು, ಹಿರಿಯರು, ಮುಖಂಡರು ಪಾಲ್ಗೊಂಡಿದ್ದರು.




ಮಾಜಿ ಸಚಿವರು ಹಾಗೂ ನರಗುಂದ ವಿಧನಸಭಾ ಕ್ಷೇತ್ರದ ಶಾಸಕರಾದ ಸಿ.ಸಿ. ಅವರ ಜನ್ಮದಿನದ ಪ್ರಯುಕ್ತ ಗದಗ ಜಿಲ್ಲಾ ಮನ್ ಕಿ ಬಾತ್ ಸಂಘಟನೆಯ ವತಿಯಿಂದ ಸನ್ಮಾನಿಸಲಾಯಿತು. ಗದಗ ಜಿಲ್ಲಾ ಮನ್ ಕಿ ಬಾತ್ ಜಿಲ್ಲಾ ಸಂಚಾಲಕ ರಾಚಯ್ಯ ಎಸ್.ಹೊಸಮಠ, ರಾಜ್ಯ ಪ್ರಶಿಕ್ಷಣ ವರ್ಗದ ಸಂಚಾಲಕರಾದ ಶ್ರೀಪತಿ ಉಡುಪಿ, ಬಿಜೆಪಿ ಮುಖಂಡರಾದ ಉಮೇಶ ಪಾಟೀಲ, ಎನ್.ಟಿ. ಹಿರೇಮಠ ಸೇರಿದಂತೆ ಇತರರು ಹಾಜರಿದ್ದರು.

# ಅಗ್ನಿ ಅವಘಡ: 10 ಲಕ್ಷಕ್ಕೂ ಹೆಚ್ಚು ಹಾನಿ!




**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ತಿಲಕ್ ಪಾರ್ಕ್ ಬಳಿ ಇರುವ ತ್ರಿವೇಣಿ ಹೋಟೆಲ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಅವಘಡ ಸಂಭವಿಸಿದೆ.

ಬೆಂಕಿ ಹೊತ್ತಿದ ಪರಿಣಾಮ, ಹೋಟೆಲ್‌ನಲ್ಲಿ ಅಡುಗೆ ಸಾಮಗ್ರಿಗಳು, ಪೀಠೋಪಕರಣಗಳು ಸೇರಿದಂತೆ ಬಹುಭಾಗ ಭಸ್ಮವಾಗಿದೆ. ಹಾನಿಯ ಅಂದಾಜು ಸುಮಾರು 10 ಲಕ್ಷ ರೂ. ಎಂದು ಹೇಳಲಾಗಿದೆ. ನಾಗೇಶ್ ಈರಪ್ಪ ಸವಡಿ ಅವರಿಗೆ ಈ ಹೋಟೆಲ್ ಸೇರಿದ್ದು, ಒಂದು ಅಂತಸ್ತಿನ ಹೋಟೆಲ್‌ನ ಬಹುಭಾಗ ಬೆಂಕಿಗೆ ಒಳಗಾಗಿದೆ.

ಸಮಯಕ್ಕೆ ಸರಿಯಾಗಿ ಆಗಮಿಸಿದ ಅಗ್ನಿಶಾಮಕ ದಳವು ಬೆಂಕಿ ನಿಯಂತ್ರಿಸುವಲ್ಲಿ ಯಶಸ್ವಿಯಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಸಿಲಿಂಡರ್‌ಗಳು ಮತ್ತು ಪಕ್ಕದ ಕಟ್ಟಡಗಳಿಗೆ ಬೆಂಕಿ ತಲುಪುವ ಮೊದಲು ಅಗ್ನಿಶಾಮಕದಳ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಈ ಘಟನೆ ಗದಗ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

# ಜನರು ಜಾತಿ ವ್ಯವಸ್ಥೆಯಿಂದ ಹೊರಬರಲಿ



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಕಿತ್ತೂರು ರಾಣಿ ಚೆನ್ನಮ್ಮ ಅವರ ಧೈರ್ಯ, ಸ್ವಾಭಿಮಾನ, ಹೋರಾಟ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ತಹಸೀಲ್ದಾರ ಬಿ.ವಿ. ಗಿರೀಶ್ ಬಾಬು ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ತಾಲೂಕು ಆಡಳಿತದ ವತಿಯಿಂದ ಗುರುವಾರ ಏರ್ಪಡಿಸಿದ್ದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಉದ್ಘಾಟಿಸಿ ಅವರು ಮಾತನಾಡಿದರು.

ರಾಣಿ ಚೆನ್ನಮ್ಮ ಅವರಂತಹ ಸಾಧಕರ ಜೀವನ ಚರಿತ್ರೆಯ ಬಗ್ಗೆ ಭವಿಷ್ಯದ ಪೀಳಿಗೆಗೆ ತಿಳಿಸುವುದೇ ಜಯಂತಿ ಆಚರಣೆಗಳ ಮೂಲ ಉದ್ದೇಶವಾಗಿದೆ. ಸಮಾಜದಲ್ಲಿ ಜಾತಿ-ಮತ-ಪಂಥಗಳ ನಡುವೆ ತಾರತಮ್ಯಗಳು ಹೆಚ್ಚಾಗುತ್ತಿದ್ದು, ಜನರು ಜಾತಿ ವ್ಯವಸ್ಥೆಯಿಂದ ಹೊರಬಂದು, ಉತ್ತಮ ಮಾರ್ಗದಲ್ಲಿ ಬದುಕು ನಡೆಸಿದರೆ ದೇಶ ಸುಂದರ, ಸಮೃದ್ಧವಾಗುತ್ತದೆ ಎಂದು ತಿಳಿಸಿದರು.

ವೀರಶೈವ ಲಿಂಗಾಯತ ಪಂಚಮಸಾಲಿ ತಾಲೂಕು ಘಟಕದ ಅಧ್ಯಕ್ಷ ಪಾಟೀಲ್ ಬೆಟ್ಟನಗೌಡ, ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮನವರು ಕೇವಲ ಒಂದು ಸಮಾಜಕ್ಕಾಗಿ ಹೋರಾಟ ಮಾಡಿದವರಲ್ಲ. ಅವರು ಸರ್ವಜನಾಂಗಕ್ಕೂ ಮೀಸಲಾದವರು. ರಾಣಿ ಚೆನ್ನಮ್ಮರ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸುಸ್ಥಿರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಈ ವೇಳೆ ಇಓ ಚಂದ್ರಶೇಖರ ವೈ.ಹೆಚ್, ಪುರಸಭೆ ಮುಖ್ಯಾಧಿಕಾರಿ ರೇಣುಕಾ ಎಸ್.ದೇಸಾಯಿ, ಬಿಇಓ ಹೆಚ್. ಲೇಪಾಕ್ಷಪ್ಪ, ಸಮಾಜ ಕಲ್ಯಾಣಾಧಿಕಾರಿ ಭೀಮಪ್ಪ, ಸಮಾಜದ ಮುಖಂಡರಾದ ಪ್ರಭಾಕರ್, ಚನ್ನಬಸವನಗೌಡ, ಮತ್ತಿಹಳ್ಳಿ ಪ್ರಕಾಶ್, ಪಂಪಣ್ಣ ಅರಸೀಕೆರೆ, ಅಡವಳ್ಳಿ ಮಂಜುನಾಥ, ಶ್ರೀಮತಿ ಕೊಟ್ರೇಶ, ಉಮಾಮಹೇಶ್ವರಿ, ಎನ್.ಜಿ. ಸಿದ್ದೇಶ್, ಸುರೇಶ್, ಬಸವರಾಜ್ ಮುಲಾಲಿ ಅಲಮಸೀಕೆರೆ, ಬಸವರಾಜ್ ಗೌರಿಹಳ್ಳಿ, ಮಹೇಶ್ ಪೂಜಾರ್, ಕಲ್ಲನಗೌಡ ಹಾರಕನಾಳು ಮುಂತಾದವರಿದ್ದರು.

# ನವೆಂಬರ್ 4 ರಂದು ಜೆಎನ್‌ಯು ವಿದ್ಯಾರ್ಥಿ ಸಂಘದ ಚುನಾವಣೆ; 6 ರಂದು ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ ವಿದ್ಯಾರ್ಥಿ ಸಂಘದ ಚುನಾವಣಾ ಸಮಿತಿಯು ಗುರುವಾರ 2025-26 ರ ವಿದ್ಯಾರ್ಥಿ ಚುನಾವಣೆಯ ತಾತ್ಕಾಲಿಕ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ನವೆಂಬರ್ 4 ರಂದು ಮತದಾನ ಮತ್ತು ನವೆಂಬರ್ 6 ರಂದು ಫಲಿತಾಂಶ ನಿಗದಿಪಡಿಸಲಾಗಿದೆ.

ಅಕ್ಟೋಬರ್ 24 ರಂದು ಚುನಾವಣಾ ಪ್ರಕ್ರಿಯೆಯು ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ತಾತ್ಕಾಲಿಕ ಮತದಾರರ ಪಟ್ಟಿಯನ್ನು ಪ್ರದರ್ಶಿಸಿ, ಅದರಲ್ಲಿ ತಿದ್ದುಪಡಿಗಳನ್ನು ಪ್ರಾರಂಭಿಸುವುದರೊಂದಿಗೆ ಪ್ರಾರಂಭವಾಗುತ್ತದೆ.

ಅಕ್ಟೋಬರ್ 25 ರಂದು ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ನಾಮಪತ್ರ ಸಲ್ಲಿಕೆ ನಮೂನೆಗಳನ್ನು ನೀಡಲಾಗುತ್ತದೆ.

# ಬಿಜೆಪಿಯಿಂದ ಮುಂಬೈ ರಕ್ಷಿಸಲು ಕೈ ಜೋಡಿಸಿ

**■ವಿಜಯಸಾಕ್ಷಿ ಸುದ್ದಿ, ಮುಂಬೈ**

ಮುಂಬರುವ ನಾಗರಿಕ ಸ್ಥಳೀಯ ಚುನಾವಣೆಗೆ ಮುಂಚಿತವಾಗಿ, ಬಿಜೆಪಿಯಿಂದ ಮುಂಬೈಗಿರುವ ಸನ್ನಿಹಿತ ಅಪಾಯವನ್ನು ನೋಡಿ ಎಂದು ಕಾಂಗ್ರೆಸ್ ಪಕ್ಷದ ನಾಯಕರಿಗೆ ಶಿವಸೇನೆ (ಯುಬಿಟಿ) ಸಂಸದ ಸಂಜಯ್ ರಾವತ್ ಮನವಿ ಮಾಡಿದ್ದಾರೆ.

ಕಾಂಗ್ರೆಸ್‌ನ ಮರಾಠಿ ನಾಯಕತ್ವವು ಆಂತರಿಕ ಭಿನ್ನಾಭಿಪ್ರಾಯಗಳನ್ನು ಮೀರಿ ಬೃಹನ್ ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ (ಬಿಎಂಸಿ) ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷವನ್ನು (ಬಿಜೆಪಿ) ಸೋಲಿಸಲು ಒಟ್ಟಾಗಿ ನಿಲ್ಲಬೇಕೆಂದು ಅವರು ಒತ್ತಾಯಿಸಿದರು.

ನಾಗರಿಕ ಚುನಾವಣೆಗಾಗಿ ಕಾಂಗ್ರೆಸ್ ಎಂಎಲ್‌ಸಿ ಭಾಯಿ ಜಗ್ತಾಪ್ ಪಕ್ಷವು ಶಿವಸೇನೆ (ಯುಬಿಟಿ) ಅಥವಾ ರಾಜ್ ಠಾಕ್ರೆ ಅವರ ಮಹಾರಾಷ್ಟ್ರ ನವನಿರ್ಮಾಣ ಸೇನೆ (ಎಂಎನ್‌ಎಸ್) ಜೊತೆ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ಹೇಳಿದ ಕೂಡಲೇ ರಾವತ್ ಅವರ ಈ ಹೇಳಿಕೆ ಹೊರಬಿದ್ದಿದೆ.

ಇದಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ರಾವತ್, ಮರಾಠಿ ಮಾತನಾಡುವ ನಾಗರಿಕರು ಮತ್ತು ಮುಂಬೈಯ ಹಿತಾಸಕ್ತಿಗಳನ್ನು ಕಾಪಾಡಲು ಎಲ್ಲ ಪಕ್ಷಗಳು ಒಗ್ಗೂಡಿದಾಗ ಸಂಯುಕ್ತ ಮಹಾರಾಷ್ಟ್ರ ಚಳುವಳಿಯನ್ನು ಕಾಂಗ್ರೆಸ್‌ಗೆ ನೆನಪಿಸಿದರು. "ಕಾಂಗ್ರೆಸ್ ಏಕತೆಯ ಐತಿಹಾಸಿಕ ಮಹತ್ವವನ್ನು ಅರ್ಥಮಾಡಿಕೊಳ್ಳಬೇಕು. ಇದು ಪ್ರಜಾಪ್ರಭುತ್ವ, ಸಂವಿಧಾನ ಮತ್ತು ಮುಂಬೈಯನ್ನು ಉಳಿಸುವ ಹೋರಾಟ" ಎಂದು ಅವರು ಹೇಳಿದರು.

### ಪ.ಪಂ ಸಭಾಂಗಣದಲ್ಲಿ ವೀರ ರಾಣಿ ಕಿತ್ತೂರು ಚೆನ್ನಮ್ಮ ಜಯಂತಿ

# ಹೆಣ್ಣೆಂದರೆ ಶಕ್ತಿ, ಹೆಣ್ಣೆಂದರೆ ಧೈರ್ಯ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವೀರರಾಣಿ ಕಿತ್ತೂರು ಚೆನ್ನಮ್ಮ ಧೈರ್ಯ, ದೇಶಪ್ರೇಮ ಮತ್ತು ನಿಷ್ಠೆಯ ಪ್ರತೀಕ. ಆ ಕಾಲದಲ್ಲಿ ಹೆಣ್ಣುಮಕ್ಕಳಿಗೆ ಶಿಕ್ಷಣ ಅಥವಾ ಯುದ್ಧಕಲೆ ಕಲಿಯುವ ಅವಕಾಶ ವಿರಳವಾಗಿತ್ತು. ಆದರೆ ಚೆನ್ನಮ್ಮ ಎಲ್ಲ ಸಾಂಪ್ರದಾಯಿಕ ಬಿಗಿಗಳನ್ನು ಮುರಿದು ನಿಜವಾದ ನಾಯಕಿಯಾಗಿ ಬ್ರಿಟಿಷ್‌ರ ವಿರುದ್ಧ ಹೋರಾಟಗೈದ ಮಹಾನ್ ಧೈರ್ಯವಂತ ಮಹಿಳೆ ಎಂದು ಪ.ಪಂ ಸದಸ್ಯೆ ಜ್ಯೋತಿ ಪಾಪ್ಪಗೌಡ್ರ ಹೇಳಿದರು.

ಇಲ್ಲಿನ ಪಟ್ಟಣ ಪಂಚಾಯಿತಿಯ ಸಭಾಂಗಣದಲ್ಲಿ ವೀರ ರಾಣಿ ಕಿತ್ತೂರು ಚೆನ್ನಮ್ಮ ಜಯಂತಿ ಹಿನ್ನೆಲೆಯಲ್ಲಿ ರಾಣಿ ಚೆನ್ನಮ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಅಂದಿನ ಯುದ್ಧದಲ್ಲಿ ರಾಣಿ ಚೆನ್ನಮ್ಮ ಕುದುರೆಯ ಮೇಲೇರಿ, ಕತ್ತಿಯನ್ನು ಬೀಸಿ ಶತ್ರುಗಳ ಕಣ್ಣಿಗೆ ಭಯ ಹುಟ್ಟಿಸಿದರು. ಅವರ ನೇತೃತ್ವದಲ್ಲಿ ಮಹಿಳೆಯರು ಮತ್ತು ಜನರು ಸೇರಿ ಬ್ರಿಟಿಷರನ್ನು ಎದುರಿಸಿ ಅನೇಕ ಸೈನಿಕರನ್ನು ಸೋಲಿಸಿದರು. ಅದು ಭಾರತದ ಮೊದಲ ಮಹಿಳಾ ಸಶಸ್ತ್ರ ಹೋರಾಟವಾಗಿತ್ತು. ಅವರ ಧೈರ್ಯ ಕೇವಲ ಯುದ್ಧಭೂಮಿಯಲ್ಲಲ್ಲ, ನ್ಯಾಯದ ಹೋರಾಟದಲ್ಲಿಯೂ ಸ್ಪಷ್ಟವಾಗಿತ್ತು. ನಾನು ಹೆಣ್ಣು, ಆದರೆ ನನ್ನ ಹೃದಯ ಸಿಂಹದಂತೆ. ಈ ಮಾತು ಇಂದಿಗೂ ಮಹಿಳೆಯರ ಆತ್ಮಸ್ಫೂರ್ತಿಗೆ ಪ್ರೇರಣೆ ಎಂದರು.

ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ಇಂದಿನ ಮಹಿಳೆಯರು ಉದ್ಯೋಗ ಕ್ಷೇತ್ರದಲ್ಲಿ, ರಾಜಕೀಯದಲ್ಲಿ ಅಥವಾ ಮನೆಯ ಹೊಣೆಗಾರಿಕೆಯಲ್ಲಿ ಅಡೆತಡೆಗಳನ್ನು ಎದುರಿಸುತ್ತಿದ್ದರೂ, ಚೆನ್ನಮ್ಮರಂತೆ ಧೈರ್ಯದಿಂದ ಮುನ್ನಡೆಯಬೇಕು. ಅವರ ಹೋರಾಟವು ಕೇವಲ ಇತಿಹಾಸವಲ್ಲ. ಅದು ಪ್ರತಿಯೊಬ್ಬ ಹೆಣ್ಣಿನ ರಕ್ತದಲ್ಲಿ ಹರಿಯುವ ಆತ್ಮಗೌರವದ ಶಕ್ತಿ. ಆದ್ದರಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕೇವಲ ಸಂಭ್ರಮದ ದಿನವಲ್ಲ, ಅದು ಮಹಿಳಾ ಶಕ್ತಿಯ ಜಾಗೃತಿಯ ಹಬ್ಬ. ಹೆಣ್ಣೆಂದರೆ ಶಕ್ತಿ, ಹೆಣ್ಣೆಂದರೆ ಧೈರ್ಯ ಎಂಬ ಸತ್ಯವನ್ನು ಸ್ಮರಿಸುವ ದಿನವಾಗಿದೆ ಎಂದರು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಸ್ಥಾಯಿ ಕಮಿಟಿ ಚೇರಮನ್ ಮುತ್ತಪ್ಪ ನೂಲ್ಕಿ, ಸದಸ್ಯರಾದ ಈರಪ್ಪ ಜೋಗಿ, ಶ್ರೀಶೈಲಪ್ಪ ಬಂಡಿಹಾಳ, ಮಲ್ಲಿಕಾರ್ಜುನಗೌಡ ಭೂಮನಗೌಡ, ನಾಮನಿರ್ದೇಶಿತ ಸದಸ್ಯರಾದ ಶೇಖಪ್ಪ ಕೆಂಗಾರ, ಕಳಕನಗೌಡ ಪೊಲೀಸ್‌ಪಾಟೀಲ, ಆಶ್ರಯ ಕಮಿಟಿ ಸದಸ್ಯ ನಿಂಗನಗೌಡ ಲಕ್ಕನಗೌಡ್ರ, ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಸೇರಿದಂತೆ ಪಂಚಮಸಾಲಿ ಸಮಾಜದ ಮುಖಂಡರು ಹಾಗೂ ಪ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka